ವಿಜಯಪುರ | ಸಂಪುಟ 04 | ಸಂಚಿಕೆ 131 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಜುಲೈ, 14, 2026

"2004ರಲ್ಲಿ ಮುಖ್ಯಮಂತ್ರಿಯಾಗಿ ಯಾರು ಆಯ್ಕೆಯಾಗಬೇಕು ಎಂಬ ಚರ್ಚೆ ನಡೆದಾಗ, ಎಂ.ಪಿ. ಪ್ರಕಾಶ್ ಅವರು ನನ್ನ ಹೆಸರನ್ನೇ ಸೂಚಿಸಿ, ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದರು."



■ ಸಿದ್ದರಾಮಯ್ಯ
ಮಾಜಿ ಮುಖ್ಯಮಂತ್ರಿ

# ಎಂಎಲ್ಸಿ ಚುನಾವಣೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರಿಂದ ಡಿಕೆಶಿ ಗೆ ಸಹಾಯ

## ಬಿಜೆಪಿ ರಾಜ್ಯಾಧ್ಯಕ್ಷರೇ ಮತ ಹಾಕಿಸಿರುವ ಸಾಧ್ಯತೆ | ವಿಜಯಪುರದಲ್ಲಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಗಂಭೀರ ಆರೋಪ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅತ್ಯಂತ ವ್ಯವಸ್ಥಿತವಾಗಿ ವಿಧಾನ ಪರಿಷತ್ ಚುನಾವಣೆಯಲ್ಲಿ ಡಿ.ಕೆ ಶಿವಕುಮಾರ್ ಅವರಿಗೆ ಸಹಾಯ ಮಾಡುವ ಕೆಲಸವನ್ನು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಮಾಡಿದ್ದಾನೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹರಿಹಾಯ್ದಿದ್ದಾರೆ.

ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನ್ನ ವೈಯಕ್ತಿಕ ವಿಚಾರ ಹಾಗೂ ನನ್ನ ಕುಟುಂಬದ ಬಗ್ಗೆ ಕೆಟ್ಟ ರೀತಿಯಲ್ಲಿ ಮಾತನಾಡಿದರೆ, ನಿಮ್ಮ ಕುಟುಂಬದ ಇತಿಹಾಸ ನನ್ನ ಬಳಿ ಇದೆ. ಅಗತ್ಯ ಬಂದರೆ ಅದನ್ನೂ ಸಾಮಾಜಿಕ ಜಾಲತಾಣದಲ್ಲಿ ಬಹಿರಂಗಪಡಿಸಬೇಕಾಗುತ್ತದೆ. ನಿಮ್ಮ ಚೇಲಾಗಳಿಂದ ನನ್ನ ವಿರುದ್ಧ ಏನಾದರೂ ಪೋಸ್ಟ್ ಮಾಡಿಸಿದರೆ, ಅದಕ್ಕಿಂತ ತೀಕ್ಷ್ಣವಾಗಿ ನಾನು ಉತ್ತರ ನೀಡುತ್ತೇನೆ ಎಂದು ಎಚ್ಚರಿಕೆ ನೀಡಿದ್ದಾರೆ.



ನಾನು ಮೊನ್ನೆ ಬಿಜೆಪಿಗೆ ಮತ ಹಾಕಿದ್ದೇನೆ. ನಾನು ಯಾವ ಪಕ್ಷದ ಶಾಸಕನಾಗಿದ್ದೇನೋ ಆ ಪಕ್ಷಕ್ಕೆ ಮತ ಹಾಕಿದ್ದೇನೆ. ಇದರಿಂದ ಕೆಲವರ ಎದೆ ಒಡೆದಂತಾಗಿದೆ ಎಂದು ಹೇಳಿದರು.

ಕೆಲವರು ಕಾಂಗ್ರೆಸ್‌ನಿಂದ ಹಣ ಹಾಗೂ ಅಭಿವೃದ್ಧಿಗೆ ಅನುದಾನ ಸಿಗಬಹುದು ಎಂದು ನಿರೀಕ್ಷಿಸಿದ್ದರು. ಆದರೆ ಬಿಜೆಪಿಯ ಕೆಲ ಶಾಸಕರು ಕೂಡ ಮತ ಹಾಕಿದ್ದಾರೆ. ನಮ್ಮ ಮಾಹಿತಿಯ ಪ್ರಕಾರ ಬಿಜೆಪಿ ರಾಜ್ಯಾಧ್ಯಕ್ಷರೇ ಮತ ಹಾಕಿಸಿರುವ ಸಾಧ್ಯತೆಯಿದೆ ಎಂದು ಯತ್ನಾಳ ಆರೋಪಿಸಿದರು.

ಡಿ.ಕೆ. ಶಿವಕುಮಾರ್ ಹೇಳಿದಂತೆ ಮತ ಹಾಕದಿದ್ದರೆ ನನ್ನ ಹಗರಣಗಳನ್ನು ಹೊರತೆಗೆಯುತ್ತಾರೆ ಎಂಬ ಭಯದಿಂದ ಬಿಜೆಪಿ ರಾಜ್ಯಾಧ್ಯಕ್ಷರು ನಡೆದುಕೊಂಡಿದ್ದಾರೆ. ಮತದಾನಕ್ಕೂ ಮುನ್ನ ವಿಪ್ ನೀಡಬೇಕಿತ್ತು. ಆದರೆ ಮತದಾನದ ನಂತರ ವಿಪ್ ಜಾರಿಗೊಳಿಸಿದ್ದಾರೆ. ಡಿ.ಕೆ. ಶಿವಕುಮಾರ್ ಅವರಿಗೆ ಬೆಂಬಲ ನೀಡುವ ಉದ್ದೇಶದಿಂದ ಬಿಜೆಪಿ ರಾಜ್ಯಾಧ್ಯಕ್ಷರು ನಾಚಿಕೆಗೇಡಿನ ಕೆಲಸ ಮಾಡಿದ್ದಾರೆ ಎಂದು ಟೀಕಿಸಿದರು.

ಈ ಕುರಿತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಿಗೆ ಪತ್ರ ಬರೆದು ಮಾಹಿತಿ ನೀಡಿರುವುದಾಗಿ ತಿಳಿಸಿದ ಅವರು, ಈ ಹಿನ್ನೆಲೆಯಲ್ಲಿ ಕೆಲವು ನಕಲಿ ಸಾಮಾಜಿಕ ಜಾಲತಾಣ ಖಾತೆಗಳ ಮೂಲಕ ತಾವು ಕಾಂಗ್ರೆಸ್‌ಗೆ ಮತ ಹಾಕಿದ್ದಾರೆ ಎಂಬ ಅನುಮಾನ ಮೂಡಿಸುವ ರೀತಿಯ ಪೋಸ್ಟ್‌ಗಳನ್ನು ಹಾಕಿಸಲಾಗಿದೆ ಎಂದು ಆರೋಪಿಸಿದರು.

# ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಜಪೂತ ಸಮಾಜದಿಂದ ಮನವಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಜಪೂತ ಸಮಾಜದ ಸರ್ವತೋಮುಖ ಪ್ರಗತಿಗಾಗಿ ರಜಪೂತ ಸಮಾಜ ಅಭಿವೃದ್ಧಿ ನಿಗಮ ಸ್ಥಾಪಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಜಪೂತ ಸಮಾಜ ಬಾಂಧವರು ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಲಿಖಿತ ಮನವಿ ಸಲ್ಲಿಸಿದರು.

ನೇತೃತ್ವ ವಹಿಸಿದ್ದ ರಜಪೂತ ಸಮಾಜದ ಜಿಲ್ಲಾಧ್ಯಕ್ಷ ಹಾಗೂ ನಗರಸಭೆ ಮಾಜಿ ಅಧ್ಯಕ್ಷ ಪರಶುರಾಮಸಿಂಗ್ ರಜಪೂತ ಮಾತನಾಡಿ, ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ಹಿಂದುಳಿದಿರುವ ರಜಪೂತ ಸಮಾಜದ ಏಳಿಗೆಗಾಗಿ ರಜಪೂತ ಅಭಿವೃದ್ಧಿ ಮಂಡಳಿ ಸ್ಥಾಪನೆಗೆ ಸರ್ಕಾರ ಮುಂದಾಗಬೇಕಿದೆ,

ರಾಜ್ಯದಲ್ಲಿ ಲಕ್ಷಾಂತರ ಜನಸಂಖ್ಯೆ ಹೊಂದಿರುವ ರಜಪೂತ ಸಮಾಜವು ಆರ್ಥಿಕವಾಗಿ, ಶೈಕ್ಷಣಿಕವಾಗಿ ಹಾಗೂ ಉದ್ಯೋಗದ ರಂಗದಲ್ಲಿ ತೀವ್ರವಾಗಿ ಹಿಂದುಳಿದಿದೆ, ಯುವ ಪೀಳಿಗೆಗೆ ಸೂಕ್ತ ಪ್ರೋತ್ಸಾಹ ಮತ್ತು ಮಾರ್ಗದರ್ಶನ ಸಿಗದೇ ಸಮಾಜವು ಇಂದಿಗು ಮುಖ್ಯವಾಹಿನಿಗೆ ಬರಲು ಸಾಧ್ಯವಾಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ಯುವಕರಿಗೆ ತರಬೇತಿ, ಸ್ವ ಉದ್ಯೋಗಕ್ಕೆ ಸಾಲ ಮೊದಲಾದ ಕಾರ್ಯ ಚಟುವಟಿಕೆಗಳನ್ನು ಕೈಗೊಳ್ಳಲು ಅಭಿವೃದ್ಧಿ ನಿಗಮ ಆರಂಭವಾಗಬೇಕಾಗಿರುವುದು ಅಗತ್ಯವಾಗಿದೆ,

ಈಗಾಗಲೇ ರಜಪೂತ ಸಮಾಜದ ಕೌಂಟಂಬಿಕ ಸಮೀಕ್ಷೆ ಹಾಗೂ ಡಿಜಿಟಲ್' ನೋಂದಣಿ ಪ್ರಕ್ರಿಯೆಯು ಅತ್ಯಂತ ಯಶಸ್ವಿಯಾಗಿ ನಡೆದಿದ್ದು, ಸಮಗ್ರ ದತ್ತಾಂಶ ವರದಿಯು ಹಿಂದುಳಿದ ವರ್ಗಗಳ ಕಲ್ಯಾಣ ಆಯೋಗದ ಪರಿಶೀಲನೆಯಲ್ಲಿದೆ. ಈ ಮಹತ್ವದ ಅಭಿಯಾನದ ಮೂಲಕ ಇಡೀ ರಾಜ್ಯದ ರಜಪೂತ ಸಮಾಜದ ಬಂಧುಗಳು ಒಗ್ಗಟ್ಟಾಗುತ್ತಿದ್ದಾರೆ,

ಕಲಬುರ್ಗಿ ಜಿಲ್ಲೆಯಲ್ಲಿ ಆರಂಭವಾಗಿರುವ ಈ ಪ್ರಕ್ರಿಯೆಗೆ ಪೂರಕವಾಗಿ ನಮ್ಮ ವಿಜಯಪುರ ಜಿಲ್ಲೆಯ ರಜಪೂತ ಸಮಾಜದ ಬಾಂಧವರೂ ಸಂಪೂರ್ಣ ಬೆಂಬಲವಿದೆ ಎಂದರು.

ಹೀಗಾಗಿ ಸಮಾಜದ ಸಮಗ್ರ ಅಭಿವೃದ್ಧಿಗಾಗಿ ರಜಪೂತ ಅಭಿವೃದ್ಧಿ ಮಂಡಳಿ ಯನ್ನು ತಕ್ಷಣವೇ ಸ್ಥಾಪಿಸಬೇಕು ಎಂದು ಒತ್ತಾಯಿಸಿದರು.

ನಗರದ ರಜಪೂತ ಸಮಾಜದ ಪ್ರಮುಖರು ಈ ವೇಳೆ ಪಾಲ್ಗೊಂಡಿದ್ದರು.

# ಏಕತೆ ಮತ್ತು ಒಕ್ಕಟ್ಟು ಸಮಾಜದ ಅಭಿವೃದ್ಧಿಗೆ ಪೂರಕ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಒಂದು ಸುಂದರ ಸಮಾಜ ನಿರ್ಮಾಣವಾಗಲು ಒಕ್ಕಟ್ಟು, ಏಕತೆ ಅವಶ್ಯಕ, ಅಂತಹ ಸಮಾಜವನ್ನು ಇಂದು ಕಾಣುತ್ತಿದ್ದೇನೆ, ತಾವು ಕೈಕೊಂಡ ಬ್ರಾಹ್ಮಣ ವಧು-ವರಾನ್ವೇಷಣ ಕಾರ್ಯಕ್ರಮ ಯಶಸ್ವಿಯಾಗಿ ಹಿಂದು ಸಂಸ್ಕೃತಿ ಉಳಿಯಲಿ ಎಂದು ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು.

ಮಂಗಳಸೂತ್ರ ಫೌಂಡೇಶನ್ ನಗರದ ಶ್ರೀ ಚಿದಂಬರ ಸೇವಾ ಸಮಿತಿ ಸಹಯೋಗದಲ್ಲಿ ಶ್ರೀ ಚಿದಂಬರೇಶ್ವರ ಸಾಂಸ್ಕೃತಿಕ ಭವನದಲ್ಲಿ ನಡೆದ 68ನೇ ರಾಜ್ಯ ಮಟ್ಟದ ಬ್ರಾಹ್ಮಣ ವಧು-ವರಾನ್ವೇಷಣ ಸಮಾವೇಶದ ಸಮಾರೋಪ ಹಾಗೂ ಶ್ರೀನಿವಾಸ ಕಲ್ಯಾಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸನಾತನ ಹಿಂದು ಸಮಾಜದ ಸ್ಥಾಪನೆಗೆ ಬ್ರಾಹ್ಮಣ ಸಮಾಜದ ಕೊಡುಗೆ ಅಪಾರ, ಅವರಿಂದಲೇ ಹಿಂದುತ್ವ ಉಳಿದು ಸಮಾಜಗಳ ಪರಿವರ್ತನೆಗಳಲ್ಲಿ ಅವರ ಪಾತ್ರ ಅಮೋಘ ಎಂದು ಹೇಳಿದರು.



ಪಾಲಕರಾದವರು ಮಕ್ಕಳನ್ನು ಮದುವೆಗೆ ಸಿದ್ಧತೆ ಮಾಡಿರಿ, ಹೆಣ್ಣು ಮಕ್ಕಳು ಜಾಗೃತರಾಗಬೇಕು ಎಂದು ಹೇಳಿದ ಅವರು ಯಾವುದೇ ಅಮೀಶಕ್ಕೆ ಬಲಿ ಬೀಳದೇ ಸುಂದರ ಸಮಾಜ ನಿರ್ಮಿಸಲು ಹಿರಿಯರು ಹಾಕಿದ ಮಾರ್ಗದಲ್ಲಿ ಮುನ್ನಡೆದು ಬದುಕಿನ ಜೀವನ ಆಯ್ಕೆ ಮಾಡಿಕೊಳ್ಳಬೇಕು ಎಂದರು. ಬ್ರಾಹ್ಮಣ ಸಮಾಜ ನಾನು ಈ ಮಟ್ಟಕ್ಕೆ ನಿಲ್ಲಲು ಮಾಡಿದ ಕಾರ್ಯ ಅಪಾರ, ಸಮಾಜದ ಸೇವೆ ಸಲ್ಲಿಸುವ, ಋಣ ತೀರಿಸಲು ಸದಾ ಸಿದ್ದನಿದ್ದೇನೆ ಎಂದವರು ಹೇಳಿದರು.

ಮತದಾನಕ್ಕೆ ಬೆಲೆ ಕೊಡಿರಿ ಅಂದಾಗ ಮಾತ್ರ ಹಿಂದುತ್ವದ ಬದುಕು ಕಾಣಲು ಸಾಧ್ಯ, ತಾವು ಎಲ್ಲವುದನ್ನು ದೂರವಿಟ್ಟು ಮತ ಮಾಡುವವದರಲ್ಲಿ ಜಾಗೃತರಾಗಿರಿ ಅಂದಾಗ ಹಿಂದು ಸಮಾಜ ಉಳಿಯಲು ಸಾಧ್ಯ ಎಂದರು.

ಸರ್ವಜ್ಞ ವಿಹಾರ ವಿದ್ಯಾಪೀಠದ ಕುಲಪತಿ ಪಂ. ಮದ್ವಾಚಾರ್ಯ ಮೊಕಾಶಿ ಅವರು ಮಾತನಾಡಿ ವಧು-ವರಾನ್ವೇಶಕರು 6 ತತ್ವಗಳನ್ನು ಮೈಗೂಡಿಸಿಕೊಂಡು ಉತ್ತಮ ವರನಿಗೆ ಧಾರೆ ಎರೆದುಕೊಡಿರಿ ಎಂದ ಅವರು ದೈವಿ ಪ್ರಯತ್ನ ಬೇಕು, ಪಾಲಕರು ಸಂಬಂದ ಬೆಸೆಯುವ ಕೆಲಸ ಮಾಡಲಿ, ಬಡತನ-ಶ್ರೀಮಂತ ಎಂದೆನ್ನದೇ ಉತ್ತಮ ಸುಸಂಸ್ಕೃತ ಕುಟುಂಬ ಸಂಬಂಧ ಬೆಳೆಸಿ ಹಿಂದು ಸಂಸ್ಕೃತಿಯಲ್ಲಿ ಬ್ರಾಹ್ಮಣ ಸಂತತಿ ಬೆಳೆಯುವಂತೆ ಮಾಡಿರಿ ಎಂದು ವಧು-ವರರ ಪಾಲಕರಲ್ಲಿ ಕರೆ ನೀಡಿದರು.

ಹಿರಿಯ ಪತ್ರಕರ್ತರಾದ ಗೋಪಾಲ ನಾಯಕ ಮಾತನಾಡಿ, ಬ್ರಾಹ್ಮಣ ಸಮಾಜ ಅನಿಷ್ಠ ಹೋಗಲಾಡಿಸಲು ಸನಾತನ ಧರ್ಮದ ಪಾಲನೆಯಲ್ಲಿ ಮಹತ್ವದ ಪಾತ್ರ ವಹಿಸಿದೆ. ವಧು-ವರರ ಸಮಾವೇಷ ಜನಪರ ಹಾಗೂ ಪ್ರಭಾವ ಬೀರುವ ಸಂಘಟನೆ ಶಕ್ತಿಯಾಗಿದೆ. ಇದರ ಸದುಪಯೋಗ ಸಮಾಜದ ಪಾಲಕರು ಪಡೆದುಕೊಂಡು ಬ್ರಾಹ್ಮಣ ಉದ್ಧರಿಸುವ ಕೆಲಸ ಮಾಡಲಿ ಎಂದು ಸಮಾಜದ ಮುಖಂಡರಲ್ಲಿ ಕರೆ ನೀಡಿದರು.

ಹರಿದಾಸ ಸಾಹಿತ್ಯ ಪ್ರಕಟಿಸುವ ಕೆಲಸ ಮಂತ್ರಾಲಯ ಮಠ ಸಂಪೂರ್ಣ ಸನ್ನದ್ದವಾಗಿದ್ದು, ಅಕ್ಕ ಪಕ್ಕದ ರಾಜ್ಯಗಳ ವಧು-ವರನ್ವೇ- ಷಣ ಮಂತ್ರಾಲಯದಲ್ಲಿ ಮಾಡುವ ಯೋಜನೆಗೆ ಸಹಕಾರ ನೀಡಿ ಸಂಘಟಿಸುವ ಭರವಸೆ ನೀಡಿದರು.

ಕನ್ಯಾ ಇವೆ ಆದರೆ ಅದಕ್ಕೆ ಜವಾಬ್ದಾರಿ ತಗೆದುಕೊಂಡು ಸಾಧಿಸುವ ಮುಖಂಡರ ಸಂಘಟನೆ ಬೇಕಿದೆ, ಈಗ ಅದು ನಡೆಯತ್ತಿದೆ, ಇದರ ಫಲ ಇಷ್ಟರಲ್ಲಿಯೇ ಸಿಗಲಿದೆ ಎಂದು ಅಗಡಿ ಶ್ರೀಗಳಾದ ವಿಶ್ವನಾಥ್ ಚಕ್ರವರ್ತಿ ಗುರುಗಳು ಹಿತನುಡಿ ಹೇಳಿದರು.

ಚೌಕಸಿ ಮಾಡದೇ ಉತ್ತಮ ವರನಿಗೆ ತಮ್ಮ ಮಗಳನ್ನು ಧಾರೆ ಎರೆದುಕೊಟ್ಟು ಭದ್ರ ಸಮಾಜ ನಿರ್ಮಿಸಲು ಪಾಲಕರು ಮುಂದಾಗಲಿ ಎಂದು ಕನ್ನೂರ ಮಠದ ಶ್ರೀಕೃಷ್ಣ ಸಂಪಗಾಂವಕರ ಹೇಳಿದರು.

ಆನಂದ ಜೋಶಿ, ಪ್ರಕಾಶ ಅಕ್ಕಲಕೋಟ, ಜೋಶಿ ಅವರುಗಳು ಮಾತನಾಡಿ ಹಿಂದು ಭದ್ರತೆಗೆ, ಸದೃಡ ಸಮಾಜಕ್ಕೆ ಸಂತಾನ ಅಭಿವೃದ್ಧಿ ಅವಶ್ಯ ಈ ನಿಟ್ಟಿನಲ್ಲಿ ಇಂತಹ ಅನ್ವೇಷಣೆ ಕಾರ್ಯಕ್ರಮ ಅವಶ್ಯ, ಮಕ್ಕಳಿಗೆ ತಿಳಿಸಿ ಹೇಳಿ ಸಂಬಂಧ ಉಳಿಸಿ ಬೆಳೆಸಿ ಎಂದು ಸಮಾಜಕ್ಕೆ ಕರೆ ನೀಡಿದರು. ಶ್ರೀ ಚಿದಂಬರ ಸೇವಾ ಸಮಿತಿ ಅಧ್ಯಕ್ಷರಾದ ಲಕ್ಷ್ಮೀಕಾಂತ ಕುಲಕರ್ಣಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

ಕಳೇದ ಎರಡು ದಿನಗಳಿಂದ ನಡೆದ ಬ್ರಾಹ್ಮಣ ವಧು-ವರಾನ್ವೇಷಣದಲ್ಲಿ ಸುಮಾರು ವಧು ಹಾಗೂ ವರ ಮತ್ತು ಅವರ ಕುಟುಂಬದ ಸದಸ್ಯರು ಭಾಗವಹಿಸಿದ್ದರು.

ಮಂಗಳಸೂತ್ರ ಫೌಂಡೇಶನ್‌ದ ಶ್ರೀನಿವಾಸ ಭಾರದ್ವಾಜ ಹಾಗೂ ಶ್ರೀನಿವಾಸ ಅವರು ಕೈಕೊಂಡ ಈ ವಧು-ವರನ್ವೇಷಣ ಕಾರ್ಯಕ್ರಮದ ಬಗ್ಗೆ ಸರ್ವರು ಅವರುಗಳನ್ನು ಹೊಗಳಿದರು. ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ವೇದಿಕೆಯ ಮೇಲೆ ಇದ್ದ ಸರ್ವರನ್ನು ಹಾಗೂ ವಿವಿಧ ರಂಗಗಲ್ಲಿ ಸಾಧನೆ ಮಾಡಿದ ಹಿರಿಯರನ್ನು ಸಾಧಕರನ್ನು ಸತ್ಕರಿಸಿದರು.

ವೇದಿಕೆಯ ಮೇಲೆ ಸಂಚಾಲಕ ಸತೀಶ ಕುಲಕರ್ಣಿ, ವಿಜಯ ಜೋಶಿ, ವಿಕಾಸ ಪದಕಿ,ಶ್ರೀ ಅಭಿನವ ವಿಶ್ವನಾಥ ಗುರೂಜಿ ಆನಂದ ವನ ಮುಕುಂದ ಕುಲ್ಕರ್ಣಿ ವೆಂಕಟೇಶ ಜೋಶಿ. ಆನಂದ ಜೋಶಿ ಶ್ರೀ ಶಂಕರ ಭಟ್ಟ ಅಗ್ನಿಹೋತ್ರೀ ಮಧುಸೂಧನ ಆಚಾರ್ಯ ಜೋಶಿ, ಶ್ರೀಮತಿ ಸವೀತಾ ಗಲಗಲಿ, ಉಪಸ್ಥಿತರಿದ್ದರು.

ಈ ಕಾರ್ಯಕ್ರಮದಲ್ಲಿ ಶ್ರೀ ಗುರುರಾಜ ಜೋಶಿ ಆನಂದ ಕುಲಕರ್ಣಿ ಕೆ ಬಿ ಕುಲಕರ್ಣಿ ಗೋವಿಂದರಾಜ ರಾ ದೇಶಪಾಂಡೆ ಶ್ರೀಮತಿ ಪಲ್ಲವಿ ಜೋಶಿ ಶ್ರೀಮತಿ ಜಯಶ್ರೀ ಕನ್ನೂರ ಪ್ರಾರಂಭದಲ್ಲಿ ಸರ್ವರನ್ನು ಸ್ವಾಗತಿಸಿದರು. ಕಾರ್ಯಕ್ರಮ ನಿರ್ವಹಣೆಯನ್ನು ಗೋವಿಂದರಾಜ ದೇಶಪಂಡೆ ಮಾಡಿದರು.

ನಂತರದಲ್ಲಿ ಸುಮಾರು ಹೊತ್ತಿನವರೆಗೆ ಗಿರೀಜಾ ಕಲ್ಯಾಣ ಕಾರ್ಯಕ್ರಮ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ನಡದವು

# ಮೀಸಲಾತಿ ನಿಯಮಾನುಸಾರ ಮರು ಪರಿಶೀಲಿಸಲು ಡಿಸಿಗೆ ಮನವಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಭೀಮ್ ರಾಜ್ಯ ದಲಿತ್ ಸೇವಾ ಸಮಿತಿ (ರಿ.) ವಿಜಯಪುರ ಜಿಲ್ಲಾ ಅಧ್ಯಕ್ಷರಾದ ನಾಗರಾಜ ಕಬಾಡೆ ಅವರ ಅಧ್ಯಕ್ಷತೆಯಲ್ಲಿ ಸಂಘಟನೆಯ ನಿಯೋಗವು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಮನವಿ ಸಲ್ಲಿಸಿತು.

ಮನವಿಯಲ್ಲಿ, ನಾಗರಿಕ ವಿಧಾನಸಭಾ ಕ್ಷೇತ್ರದ ಅಲಿಯಾಬಾದ್ ಗ್ರಾಮ ಪಂಚಾಯತ್ ವಾರ್ಡ್ ಸಂಖ್ಯೆ-2ರ ಮೀಸಲಾತಿಯನ್ನು ನಿಯಮಾನುಸಾರ ಮರು ಪರಿಶೀಲಿಸಿ, ಪರಿಶಿಷ್ಟ ಜಾತಿ (ಎಸ್‌ಸಿ) ಮಹಿಳೆಗೆ ಮೀಸಲಾತಿ ಕಲ್ಪಿಸುವಂತೆ ಒತ್ತಾಯಿಸಲಾಯಿತು.

ಕಳೆದ ಗ್ರಾಮ ಪಂಚಾಯತ್ ಚುನಾವಣೆಯಲ್ಲಿ ವಾರ್ಡ್ ಸಂಖ್ಯೆ-2 ಪರಿಶಿಷ್ಟ ಜಾತಿ (ಎಸ್‌ಸಿ) ಪುರುಷರಿಗೆ ಮೀಸಲಾಗಿತ್ತು. ಪ್ರಸ್ತುತ ಮೀಸಲಾತಿ ಸರಣಿಯ ನಿಯಮಗಳ ಪ್ರಕಾರ ಈ ಬಾರಿ ಸದರಿ ವಾರ್ಡ್ ಪರಿಶಿಷ್ಟ ಜಾತಿ (ಎಸ್‌ಸಿ) ಮಹಿಳೆಗೆ ಮೀಸಲಾಗಬೇಕಾಗಿತ್ತು.

ಆದರೆ ಪ್ರಕಟಿಸಿರುವ ಮೀಸಲಾತಿಯಲ್ಲಿ ನಿಯಮ ಪಾಲನೆಯಾಗಿಲ್ಲ ಎಂಬ ಅನುಮಾನ ವ್ಯಕ್ತವಾಗಿದ್ದು, ಇದರಿಂದ ಪರಿಶಿಷ್ಟ ಜಾತಿಯ ಮಹಿಳೆಯರಿಗೆ ದೊರೆಯಬೇಕಾದ ಸಂವಿಧಾನಬದ್ಧ ಅವಕಾಶಕ್ಕೆ ಧಕ್ಕೆಯಾಗುವ ಸಾಧ್ಯತೆ ಇದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ದಾಖಲೆಗಳು ಹಾಗೂ ಮೀಸಲಾತಿ ಸರಣಿಯನ್ನು ಸಮಗ್ರವಾಗಿ ಪರಿಶೀಲಿಸಿ, ಯಾವುದೇ ಲೋಪದೋಷಗಳಿದ್ದಲ್ಲಿ ಅವುಗಳನ್ನು ಸರಿಪಡಿಸಿ, ವಾರ್ಡ್ ಸಂಖ್ಯೆ-2ನ್ನು ನಿಯಮಾನುಸಾರ ಎಸ್‌ಸಿ ಮಹಿಳೆಗೆ ಮೀಸಲಾತಿ ಕಲ್ಪಿಸುವಂತೆ ಸಂಘಟನೆ ಒತ್ತಾಯಿಸಿತು.

ಈ ಸಂದರ್ಭದಲ್ಲಿ ಭೀಮ್ ರಾಜ್ಯ ದಲಿತ್ ಸೇವಾ ಸಮಿತಿ (ರಿ.) ರಾಜ್ಯಾಧ್ಯಕ್ಷ ಶ್ರೀ ಅಪ್ಪುರಾಜ್ ನಿಮಾದಾರ, ರಾಜ್ಯ ಉಪಾಧ್ಯಕ್ಷ ವಿಜಯಕುಮಾರ ನಿಮಾದಾರ, ಜಿಲ್ಲಾ ಗೌರವಾಧ್ಯಕ್ಷ ಕಿರಣ-ಕುಮಾರ ಅಲಿಯಾಬಾದ, ರಾಜ್ಯ ಮಹಿಳಾ ಅಧ್ಯಕ್ಷೆ ನೀಲಾಂಬಿಕಾ ಕಟ್ಟಿಮನಿ, ವಿಜಯಪುರ ಜಿಲ್ಲಾ ಮಹಿಳಾ ಅಧ್ಯಕ್ಷೆ ಶಿಲ್ಪಾ ಮೇತ್ರಿ, ವಿಜಯಪುರ ಜಿಲ್ಲಾ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಅಬ್ದುಲ್ ಹಕ್ ಇನಾಮದಾರ, ನಗರ ಘಟಕದ ಅಧ್ಯಕ್ಷ ರವಿಚಂದ್ರ ಶಹಾಪುರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ಕಟ್ಟಿಮನಿ, ಸಾಹೇಬಲಾಲ ಹಿಪ್ಪರಗಿ, ಎಂ.ಎಂ. ಖಾನ್, ಸಂತೋಷ ಕಟ್ಟಿಮನಿ, ಹುಸೇನ ಹಿಪ್ಪರಗಿ, ರಾಘವೇಂದ್ರ ಕಾಸೆ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಉಕ ಭಾಗದ ಗ್ರಾಮೀಣ ಜೀವನದ ಮೌಲ್ಯ, ಬದುಕು ಆಧರಿಸಿದ 'ಧಗೆ' ಚಿತ್ರ

## ವಿಜಯಪುರದಲ್ಲಿ 'ಧಗೆ' ಚಿತ್ರ ತಂಡದ ನಾಯಕ ಸಂಗಮೇಶ ಉಪಾಸೆ, ನಿರ್ದೇಶಕ ಕೆರ್ನಳ್ಳಿ ಈಶ್ವರ, ಪದ್ಮಶ್ರೀ ಮಂಜಮ್ಮ ಜೋಗತಿ & ಚಿತ್ರತಂಡದಿಂದ ಸುದ್ದಿಗೋಷ್ಟಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಉತ್ತರ ಕರ್ನಾಟಕ ಭಾಗದ ಗ್ರಾಮೀಣ ಜೀವನದ ಮೌಲ್ಯ, ಬದುಕು ಆಧರಿಸಿದ ಹಾಗೂ ವಿಜಯಪುರ ನೆಲದ ಕಲಾವಿದರ ಬಾಹುಳ್ಯವುಳ್ಳ 'ಧಗೆ' ಚಲನಚಿತ್ರ ಡಿಸೆಂಬರ್ ಮಾಸಾಂತ್ಯದೊಳಗೆ 150 ಚಿತ್ರ ಮಂದಿರಗಳಲ್ಲಿ ಬಿಡುಗಡೆಯಾಗಲಿದೆ ಎಂದು ಚಲನಚಿತ್ರದ ನಿರ್ದೇಶಕ ಕೆರ್ನಳ್ಳಿ ಈಶ್ವರ ಹೇಳಿದರು.

ಸೋಮವಾರ ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,

ಧಗೆ ಎನ್ನುವುದು ವಿಜಯಪುರ ಭಾಗದಲ್ಲಿ ಜನಜನಿತ, ಇಲ್ಲಿನ ಬಿರುಬಿಸಿಲಿನ ಪ್ರಭಾವದಿಂದಾಗಿ ಧಗೆ ಸಾಮಾನ್ಯ, ಈ ವಾತಾವರಣ ಮಾನವ ಜೀವನದಲ್ಲಿ ಯಾವ ರೀತಿ ಪ್ರಭಾವ ಬೀರಲಿದೆ ಎಂಬುದರ ಕಥಾ ಹಂದರವನ್ನು ಈ ಚಿತ್ರ ಹೊಂದಿದೆ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಮಂಜಮ್ಮ ಜೋಗತಿ ಈ ಚಿತ್ರದಲ್ಲಿ ಜೋಗತಿಯ ಪ್ರಮುಖ ಪಾತ್ರ ನಿಭಾಯಿಸುತ್ತಿದ್ದು, ಮಗುವೊಂದನ್ನು ಅವರು ಸಾಕುವ ನಿಟ್ಟಿನಲ್ಲಿ ಅವರು ವಹಿಸುವ ಶ್ರಮ, ಮಮತೆ, ಸಮಾಜದ ದೃಷ್ಟಿಕೋನ ಹೀಗೆ ಅನೇಕ ಆಯಾಮಗಳಲ್ಲಿ ಕಥೆ ಹೆಣೆಯಲಾಗಿದೆ ಎಂದರು.



ಖ್ಯಾತ ನಟ, ಕೆಎಎಸ್ ಅಧಿಕಾರಿ ಸಂಗಮೇಶ ಉಪಾಸೆ ಕಥಾನಾಯಕರಾಗಿದ್ದು, ನೀತಾ ಬಿಜಾಪುರ್, ಮುತ್ತು ಶಂಕ್ರಣ್ಣನವರ, ಪರಶುರಾಮ ಹೊಸಮನೆ, ಸಚಿನ್ ಹಳ್ಳಿ ಕಟ್ಟೆ , ಸುನಿಲ್ ಕುಮಾರ್ ಸೇರಿದಂತೆ ಅನೇಕ ಕಲಾವಿದರು ನಟಿಸಿದ್ದಾರೆ. ಶೇ.90 ರಷ್ಟು ವಿಜಯಪುರದ ಕಲಾವಿದರೇ ಈ ಚಿತ್ರದಲ್ಲಿ ನಟಿಸಿರುವುದು ಇನ್ನೊಂದು ವಿಶೇಷ, ಆನಂದ್ ದಿಂಡವಾರ ಛಾಯಾಗ್ರಹಣ, ಕೆ.ಎಂ.ಇಂದ್ರ ಅವರ ಸಂಗೀತವಿದೆ ಎಂದರು.

ಕೆರ್ನಳ್ಳಿ ಈಶ್ವರ್, ದೀಪ ಬಿ. ಎಮ್., ಮಡಿವಾಳಪ್ಪ ಗೋಗಿ ಅವರು ಈ ಚಿತ್ರವನ್ನು ನಿರ್ಮಿಸಿದ್ದಾರೆ ಎಂದರು.

ಈ ಚಿತ್ರವನ್ನು ಸಿನಿ ಸ್ಟಾಲ್, ಬೆಂಗಳೂರು ಹಾಗೂ ಯುನಿವರ್ಸಲ್ ಸ್ಟುಡಿಯೊ, ವಿಜಯಪುರ ಎರಡು ಸಂಸ್ಥೆಗಳು ಸೇರಿ ನಿರ್ಮಾಣ ಮಾಡುತ್ತಿದ್ದಾರೆ ಎಂದು ವಿವರಿಸಿದರು.

ಖ್ಯಾತ ನಟ ಸಂಗಮೇಶ ಉಪಾಸೆ ಮಾತನಾಡಿ, ಕಲಾವಿದರಿಗೆ ಪ್ರೇಕ್ಷಕರೇ ದೇವರು, ಉತ್ತರ ಕರ್ನಾಟಕ ಭಾಗದ ಕಲಾವಿದರು, ಉತ್ತರ ಕರ್ನಾಟಕ ಭಾಗದ ಕಥಾ ನೆಲೆಯುಳ್ಳ ಚಿತ್ರ ಇದಾಗಿದೆ, ಒಂದು ಅರ್ಥದಲ್ಲಿ ಇದೊಂದು ಮೌಲ್ಯಧಾರಿತ ಕನ್ನಡ ಚಿತ್ರವಾಗಿದೆ ಎಂದರು.

ಕರ್ನಾಟಕ ಜಾನಪದ ಅಕಾಡೆಮಿ ಮಾಜಿಅಧ್ಯಕ್ಷೆ,ಪದ್ಮಶ್ರೀ ಮಂಜಮ್ಮ ಜೋಗತಿ, 'ಧಗೆ' ಚಲನಚಿತ್ರ ನಿರ್ಮಾಪಕರಾದ ಕೆರ್ನಳ್ಳಿ ಈಶ್ವರ್, ದೀಪ ಬಿ. ಎಮ್., ಮಡಿವಾಳಪ್ಪ ಗೋಗಿ ಸೇರಿದಂತೆ ಚಿತ್ರತಂಡದವರು ಸುದ್ದಿಗೋಷ್ಟಿಯಲ್ಲಿ ಪಾಲ್ಗೊಂಡಿದ್ದರು.

# ನಾಡಿನ ಏಕೀಕರಣಕ್ಕೆ ಆಲೂರು ವೆಂಕಟರಾಯರ ಕೊಡುಗೆ ಅಪಾರ



ಕಲಬುರಗಿ : 'ಕರ್ನಾಟಕ ಕುಲಪುರೋಹಿತ'ರೆಂದೇ ಪ್ರಸಿದ್ಧರಾದ ಕನ್ನಡದ ಧೀಮಂತ ನಾಯಕ, 'ಕರ್ನಾಟಕ ಏಕೀಕರಣ ಚಳುವಳಿಯ ರೂವಾರಿ' ಆಲೂರು ವೆಂಕಟರಾಯರ ಕೊಡುಗೆ ಅಪಾರವಾಗಿದೆ ಎಂದು ಉಪನ್ಯಾಸಕ, ಲೇಖಕ ಎಚ್.ಬಿ.ಪಾಟೀಲ ಹೇಳಿದರು.

ನಗರದ ಖಾದ್ರಿ ಚೌಕ್ ನಲ್ಲಿನ 'ಸಕ್ಸಸ್ ಕಂಪ್ಯೂಟ-ರ ತರಬೇತಿ ಸಂಸ್ಥೆ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ಆಲೂರು ವೆಂಕಟರಾಯರ 146ನೇ ಜನ್ಮದಿನಾಚರಣೆ'ಯ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪನಮನಗಳನ್ನು ಸಲ್ಲಿಸಿ, ಅವರು ಮಾತನಾಡುತ್ತಿದ್ದರು.

ವೆಂಕಟರಾಯರು 'ಕರ್ನಾಟಕ ಗತವೈಭವ' ಕೃತಿ ರಚನೆ, 'ಜಯಕರ್ನಾಟಕ' ಪತ್ರಿಕೆ ಮತ್ತು ಕರ್ನಾಟಕ ಇತಿಹಾಸ ಸಂಶೋಧನಾ ಮಂಡಲದ ಮೂಲಕ ಕನ್ನಡಿಗರಲ್ಲಿ ನಾಡು-ನುಡಿಯ ಅಭಿಮಾನ ಮೂಡಿಸಿದ ಮಹಾನ್ ಚೇತನ. ಕರ್ನಾಟಕ ಏಕೀಕರಣ ಚಳುವಳಿಯ ಬೌದ್ಧಿಕ ನಾಯಕತ್ವ ವಹಿಸಿ, ಭಾಷಾವಾರು ಪ್ರಾಂತ್ಯಗಳ ರಚನೆಗೆ ಬುನಾದಿ ಹಾಕಿದರು. 1907ರಲ್ಲಿ ಕನ್ನಡ ಗ್ರಂಥಕರ್ತರ ಸಮ್ಮೇಳನವನ್ನು ಆಯೋಜಿಸಿದರು ಮತ್ತು ಕರ್ನಾಟಕ ಗ್ರಂಥ ಮಂಡಳಿಯನ್ನು ಸ್ಥಾಪಿಸಿದರು. ಕರ್ನಾಟಕದ ಇತಿಹಾಸವನ್ನು ಜನಪ್ರಿಯಗೊಳಿಸಿದರು. 'ವಾಗ್ಭೂಷಣ' ಮತ್ತು 'ಜಯ ಕರ್ನಾಟಕ' ಪತ್ರಿಕೆಗಳ ಸಂಪಾದಕರಾಗಿ ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಪ್ರಸಾರ ಮಾಡುವ ಮೂಲಕ ಕನ್ನಡ ನಾಡಿಗೆ ಅವಿಸ್ಮರಣೀಯ ಕೊಡುಗೆ ನೀಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಸೈಯದ್ ಹಮೀದ್ ಹಾಗೂ ವಿದ್ಯಾರ್ಥಿಗಳು ಇದ್ದರು.

# ರಾಜ್ಯದಲ್ಲಿ ಗೊಂದಲ ಸೃಷ್ಟಿಸುವ ಪ್ರಯತ್ನ ಬೇಡ: ಹರಿಪ್ರಸಾದ್ ವಿರುದ್ಧ ದೇವಿಂದ್ರ ವಾಗ್ದಾಳಿ



ಕಲಬುರಗಿ: ಬೆಳಗಾವಿಯಲ್ಲಿ ನಡೆಯುತ್ತಿರುವ ಆರ್‌ಎಸ್‌ಎಸ್ ಸಭೆಯ ಕುರಿತು ಕಾಂಗ್ರೆಸ್ ರಾಜ್ಯಾಧ್ಯಕ್ಷ ಬಿ.ಕೆ. ಹ-ರಿಪ್ರಸಾದ್ ನೀಡಿರುವ ಹೇಳಿಕೆ ರಾಜ್ಯದಲ್ಲಿ ಅನಗತ್ಯ ಗೊಂದಲ ಮತ್ತು ಆತಂಕ ಸೃಷ್ಟಿಸುವ ಪ್ರಯತ್ನವಾಗಿದೆ ಎಂದು ಬಿಜೆಪಿ ಓಬಿಸಿ ಮೋರ್ಚಾ ನಗರಾಧ್ಯಕ್ಷ ದೇವಿಂದ್ರ ದೇಸಾಯಿ ಕಲ್ಲೂರ ವಾಗ್ದಾಳಿ ನಡೆಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಗಡಿಭಾಗದ ಜಿಲ್ಲೆ ಬೆಳಗಾವಿಯಲ್ಲಿ ಆರ್‌ಎಸ್‌ಎಸ್ ಸಭೆಯ ಬಳಿಕ ಯಾವುದಾದರೂ ಅನಾಹುತ ಸಂಭವಿಸಬಹುದು ಎಂಬ ರೀತಿಯ ಹೇಳಿಕೆ ಜವಾಬ್ದಾರಿಯುತ ರಾಜ-ಕಾರಣಿಗೆ ಶೋಭೆ ತರುವುದಿಲ್ಲ. ಇಂತಹ ಹೇಳಿಕೆಗಳಿಂದ ಜನರಲ್ಲಿ ಗೊಂದಲ ಮತ್ತು ಭಯದ ವಾತಾವರಣ ನಿರ್ಮಾಣವಾಗುತ್ತದೆ ಎಂದು ಆರೋಪಿಸಿದರು.

"ಕಾಂಗ್ರೆಸ್ ಸರ್ಕಾರವೇ ರಾಜ್ಯದಲ್ಲಿ ಅಧಿಕಾರದಲ್ಲಿದೆ. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು ಸರ್ಕಾರದ ಕರ್ತವ್ಯ. ಆತಂಕ ಸೃಷ್ಟಿಸುವ ಹೇಳಿಕೆಗಳನ್ನು ನೀಡುವ ಬದಲು ಆಡಳಿತ ಯಂತ್ರವನ್ನು ಸಮರ್ಪಕವಾಗಿ ಬಳಸಿಕೊಂಡು ರಾಜ್ಯದಲ್ಲಿ ಶಾಂತಿ ಕಾಪಾಡುವತ್ತ ಗಮನ ಹರಿಸಬೇಕು" ಎಂದು ಅವರು ಹೇಳಿದರು.

ರಾಜ್ಯದ ಗೃಹ ಸಚಿವರು ಪ್ರತಿಯೊಂದು ವಿಷಯದಲ್ಲೂ ಆರ್‌ಎಸ್‌ಎಸ್ ಹಾಗೂ ಬಿಜೆಪಿ ವಿರುದ್ಧವೇ ಮಾತನಾಡುತ್ತಿದ್ದಾರೆ. ಜನರ ಭದ್ರತೆ ಮತ್ತು ಕಾನೂನು ಸುವ್ಯವಸ್ಥೆಗೆ ಆದ್ಯತೆ ನೀಡಬೇಕಾದವರು ರಾಜ-ಕೀಯ ಆರೋಪ-ಪ್ರತ್ಯಾರೋಪಗಳಲ್ಲಿ ತೊಡಗಿರುವುದು ಸರಿಯಲ್ಲ ಎಂದು ಅವರು ಟೀಕಿಸಿದರು. ಸರ್ಕಾರದ ಸಚಿವರೊಬ್ಬರು ಆರ್-ಎಸ್‌ಎಸ್ ಸಭೆಗೆ ಸೂಕ್ತ ಭದ್ರತೆ ನೀಡಲಾಗುವುದು ಎಂದು ಹೇಳಿಕೆ ನೀಡಿರುವಾಗ, ಕಾಂಗ್ರೆಸ್ ಅಧ್ಯಕ್ಷರ ಹೇಳಿಕೆ ಸರ್ಕಾರದೊಳಗಿನ ಗೊಂದಲವನ್ನೇ ಬಿಂಬಿಸುತ್ತದೆ ಎಂದು ದೇವಿಂದ್ರ ದೇಸಾಯಿ ಕಲ್ಲೂರ ಹೇಳಿದರು.

ಬಿ.ಕೆ. ಹರಿಪ್ರಸಾದ್ ಅವರು ತಮ್ಮ ಹೇಳಿಕೆಯನ್ನು ಕೂಡಲೇ ಹಿಂಪಡೆದು, ರಾಜ್ಯದಲ್ಲಿ ಶಾಂತಿ ಮತ್ತು ಸೌಹಾರ್ದ ವಾತಾವರಣ ಕಾಪಾಡುವ ನಿಟ್ಟಿನಲ್ಲಿ ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು ಎಂದು ದೇವಿಂದ್ರ ದೇಸಾಯಿ ಕಲ್ಲೂರ ಆಗ್ರಹಿಸಿದ್ದಾರೆ.



# ಭಾರತದಲ್ಲಿ ಜನಸಂಖ್ಯೆಯ ಸಮರ್ಥ ನಿರ್ವಹಣೆ

ಕಲಬುರಗಿ : ಭಾರತದ ಜನಸಂಖ್ಯೆಯು ಸದ್ಯ ಸುಮಾರು 147 ಕೋಟಿಯಾಗಿದ್ದು, ವಿಶ್ವದಲ್ಲಿ ಪ್ರಥಮ ಸ್ಥಾನದಲ್ಲಿದೆ. ಆದರೂ ಕೂಡಾ ನಮ್ಮ ದೇಶವು ಜನಸಂಖ್ಯೆಯ ಸಮರ್ಥ ನಿರ್ವಹಣೆ ಮಾಡುತ್ತಿದೆ ಎಂದು ಅರ್ಥಶಾಸ್ತ್ರ ಉಪನ್ಯಾಸಕ ಎಚ್.ಬಿ.ಪಾಟೀಲ್ ಹೇಳಿದರು. ನರೋಣಾ ಗ್ರಾಮದಲ್ಲಿನ 'ಜಗಜ್ಯೋತಿ ಟ್ಯುಟೋರಿಯಲ್ಸ್'ನಲ್ಲಿ ಕಲಬುರಗಿಯ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಶನಿವಾರ ಸಾಯಂಕಾಲ ಜರುಗಿದ "ವಿಶ್ವ ಜನಸಂಖ್ಯೆ ದಿನಾಚರಣೆ"ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಪ್ರತಿ ವರ್ಷ ಜುಲೈ-11ರಂದು 'ವಿಶ್ವ ಜನಸಂಖ್ಯಾ ದಿನ'ವನ್ನು ಆಚರಿಸಲಾಗುತ್ತದೆ. ಜಾಗತಿಕ ಜನಸಂಖ್ಯೆಯ ಸಮಸ್ಯೆಗಳು, ಲಿಂಗ ಸಮಾನತೆ, ಕುಟುಂಬ ಯೋಜನೆ ಮತ್ತು ಮಾನವ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ಪ್ರಸ್ತುತವಾಗಿ ವಿಶ್ವದ ಜನಸಂಖ್ಯೆಯು ಸರಿ ಸುಮಾರು 8.2 ಶತಕೋಟಿಯನ್ನು ತಲುಪಿದೆ ಎಂದು ಅಂ-ದಾಜಿಸಲಾಗಿದೆ. "ಯುವಕರ ಭರವಸೆಗಳು ಮತ್ತು ಆಕಾಂಕ್ಷೆಗಳನ್ನು ನನಸಾಗಿಸುವುದು ಇಂದು ಮತ್ತು ಭವಿಷ್ಯಕ್ಕಾಗಿ" ಇದು ಈ ವರ್ಷದ ಜನಸಂಖ್ಯೆ ದಿನಾಚರಣೆಯ ಘೋಷವಾಕ್ಯವಾಗಿದೆ. ಆದ-'ರ್ಶ ಜನಸಂಖ್ಯೆ ನಿರ್ವಹಿಸುವುದು ಅಗತ್ಯವಾಗಿದೆ. ಜನಸಂಖ್ಯೆಯು ಯಾವುದೇ ರಾಷ್ಟ್ರದ ಅಭಿವೃದ್ಧಿ, ಆರ್ಥಿಕ ಪ್ರಗತಿ ಮತ್ತು ಸಂಪನ್ಮೂಲ ನಿರ್ವಹಣೆಯ ಪ್ರಮುಖ ಮಾನದಂಡವಾಗಿದೆ. ಮಾನವ ಸಂಪನ್ಮೂಲದ ಸರಿಯಾದ ಬಳಕೆ, ಚಿಕ್ಕ ಕುಟುಂಬಗಳ ಮಹತ್ವ, ಲಿಂಗ ಸಮಾನತೆ ಮತ್ತು ಸುಸ್ಥಿರ ಅಭಿವೃದ್ಧಿಯ ಗುರಿಗಳನ್ನು ಸಾಧಿಸಲು ಜನಸಂಖ್ಯೆಯ ಸರಿಯಾದ ತಿಳುವಳಿಕೆ ಅತ್ಯಗತ್ಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಟ್ಯುಟೋರಿಯಲ್ಸ್ ಮುಖ್ಯಸ್ಥ ಜಗದೀಶ್ ಭಾಸಗಿ, ಸಮಾಜ ಸೇವಕ ಶಿವಯೋಗೆಪ್ಪಾ ಎಸ್. ಬಿರಾದಾರ ಹಾಗೂ ವಿದ್ಯಾರ್ಥಿಗಳು ಇದ್ದರು.

# ಆರ್.ಜೆ ಕಾಲೇಜಿನಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ

ಕಲಬುರಗಿ: ನಗರದ ಸರದಾರ ವಲ್ಲಭಭಾಯಿ ಪಟೇಲ್ ಎಜ್ಯುಕೇಷನ್ ಟ್ರಸ್ಟ್ ಸಂಚಾಲಿತ ರಮಾಬಾಯಿ ಜಹಾಗೀರದಾರ್ (ಆರ್.ಜೆ) ಸ್ವತಂತ್ರ ಪದವಿ ಪೂರ್ವ ವಿಜ್ಞಾನ ಕಾಲೇಜು, ರಾಷ್ಟ್ರೀಯ ಸೇವಾ ಯೋಜನೆ (ಓಖಖ) ಘಟಕದ ಸಂಯುಕ್ತಾಶ್ರಯದಲ್ಲಿ ದಿನಾಂಕ: 11-07-2026 ಶನಿವಾರ ಬೆಳಿಗ್ಗೆ 10:00 ಗಂಟೆಯಿಂದ ಸಾಯಂಕಾಲ 4:00 ಯವರೆಗೆ ಹೆಚ್.ಕೆ.ಇ ಸಂಸ್ಥೆಯ ಅಡಿಯಲ್ಲಿರುವ ಬಸವೇಶ್ವರ ಬೋಧನಾ ಮತ್ತು ಸಾರ್ವಜನಕ ಆಸ್ಪತ್ರೆ ಹಾಗೂ ಎಸ್. ನಿಜಲಿಂಗಪ್ಪ ಡೆಂಟಲ್ ಆಸ್ಪತ್ರೆಯ ಸಹಯೋಗದಲ್ಲಿ ನುರಿತ ವೈದ್ಯರಿಂದ ಉಚಿತ ಆರೋಗ್ಯ ತಪಾಸಣೆ ಶಿಭಿರವನ್ನು ಏರ್ಪಡಿಸಲಾಗಿತ್ತು.

ಈ ಶಿಬಿರದಲ್ಲಿ ಜನರಲ್ ಮೆಡಿಸನ್ (ಬಿಪಿ, ಶುಗರ್ ಹಾಗೂ ಥೈರಾಯಿಡ್), ಒ.ಬಿ.ಜಿ, ಇ.ಎನ್.ಟಿ, ಡರ್ಮಟಾಲೊಜಿ, ಕಮ್ಯುನಿಟಿ ಮೆಡಿಸನ್, ಡೆಂಟಿಸ್ಟ್ರೀ, ಸ್ಕಿನ್ & ಹೇರ್ ಸಂರಕ್ಷಣೆ, ನೇತ್ರ ತಪಾಸಣೆಯನ್ನು 500ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು, ಉಪನ್ಯಾಸಕರು ಹಾಗೂ ಸಿಬ್ಬಂಧಿ ಬಳಗ ಆರೋಗ್ಯ ತಪಾಸಣೆಯ ಸದುಪಯೋಗ ಪಡೆದುಕೊಂಡರು.ಈ ತಪಾಸಣೆ ಶಿಬಿರದ ಕನಸನ್ನು ಕಂಡಿರುವ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ಶಶೀಲ ಜಿ. ನಮೋಶಿ, ಅಧ್ಯಕ್ಷರು ಹೆಚ್.ಕೆ.ಇ. ಸಂಸ್ಥೆ ಕಲಬುರಗಿ ಇವರು ಕಲ್ಯಾಣ ಕರ್ನಾಟಕ ಭಾಗದ ವಿವಿಧ ಶಾಲಾ ಹಾಗೂ ಕಾಲೇಜುಗಳಲ್ಲಿ ಮಕ್ಕಳ ಹಾಗೂ ಶಿಕ್ಷಕ ವರ್ಗಗಳ ಆರೋಗ್ಯದ ಹಿತದೃಷ್ಟಿಯಿಂದ ಉಚಿತವಾದಂತಹ ಆರೋಗ್ಯ ತಪಾಸಣೆಯನ್ನು ಕಲಬುರಗಿ ಜಿಲ್ಲೆಯಲ್ಲಿ ನಡೆಸಿಕೊಂಡು ಬರುತ್ತಿದ್ದಾರೆ.

ಕಾಲೇಜಿನ ಪ್ರಾಚಾರ್ಯರಾದ ಡಾ. ಭುರ್ಲಿ ಪ್ರಹ್ಲಾದ, ಆಡಳಿತಾಧಿಕಾರಿಗಳಾದ ಶ್ರೀಮತಿ. ಜ್ಯೋತಿ ಭುರ್ಲಿ, ಉಪ ಪ್ರಾಚಾರ್ಯರಾದ ಕೇದಾರ ದೀಕ್ಷಿತ್, ಎನ್.ಎಸ್.ಎಸ್. ಕಾರ್ಯಕ್ರಮಾಧಿಕಾರಿಗಳಾದ ಶ್ರೀ ಪ್ರಕಾಶ ಚವ್ಹಾಣ ಹಾಗೂ ಸರ್ವ ಉಪನ್ಯಾಸಕ, ಸಿಬ್ಬಂಧಿ ಬಳಗದ ವತಿಯಿಂದ ಸರ್ವ ವೈದ್ಯ ತಂಡಕ್ಕೆ ಸನ್ಮಾನಿಸಲಾಯಿತು.

# ಪಂಚ ಗ್ಯಾರಂಟಿ: ಬಡ ಕುಟುಂಬಗಳ ಬದುಕಿಗೆ ಆಶಾಕಿರಣ

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ರಾಜ್ಯ ಸರ್ಕಾರದ ಮಹತ್ವದ ಪಂಚ ಗ್ಯಾರಂಟಿ ಯೋಜನೆಗಳು ಮಹಿಳೆಯರ ಸಬಲೀಕರಣ-ಕ್ಕೆ ಬಲ ತುಂಬಿದ್ದು, ಬಡ ಕುಟುಂಬಗಳ ಬದುಕಿಗೆ ಹೊಸ ಆಶಾಕಿರಣವಾಗಿವೆ ಎಂದು ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಸಂತೋಷ್ ಗಣಾಚಾರಿ ತಿಳಿಸಿದ್ದಾರೆ.

ತಾಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಹಾಗೂ ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆ ಸಮಿತಿಯ ಉಪಾಧ್ಯಕ್ಷೆ ಮಹಾದೇವಿ ಗೋಕಾಕ ಅವರು ಮಾತನಾಡಿ, ಸರ್ಕಾರ ಮಹಿಳೆಯರ ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಸಬಲೀಕರಣಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು, ಅದರಲ್ಲಿ ಗ್ಯಾರಂಟಿ ಯೋಜನೆಗಳು ಅತ್ಯಂತ ಪರಿಣಾಮಕಾರಿ ಆಗಿವೆ ಎಂದು ಹೇಳಿದರು.

ಸರ್ಕಾರ ನುಡಿದಂತೆ ನಡೆದು ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿದ್ದು ಬಡವರು ಹಾಗೂ ಮಹಿಳೆಯರ ಜೀವನಮಟ್ಟ ಸುಧಾರಣೆಗೆ ಸಹಕಾರಿಯಾಗಿವೆ, ಅನೇಕ ಮಹಿಳೆಯರು ಸ್ವಾವಲಂಬಿ ಬದುಕನ್ನು ಕಟ್ಟಿಕೊಳ್ಳಲು ಸಾಧ್ಯವಾಗಿದೆ ಎಂದು ತಿಳಿಸಿದರು.

ಇನ್ನೂ, ಯಾವುದೇ ಅರ್ಹರು ಯೋಜನೆಗಳಿಂದ ವಂಚಿತರಾಗಿದ್ದರೆ, ಅಗತ್ಯ ದಾಖಲೆಗಳನ್ನು ಸಲ್ಲಿಸಿದರೆ ಸಮಸ್ಯೆ ಪರಿಹರಿಸಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಉಪತಹಶೀಲ್ದಾರ್ ಎನ್.ಕೆ. ನದಾಫ್,ತಾಲೂಕು ಪಂಚಾಯಿತಿ ಇಒ ಸುನಿಲ್ ಮುದ್ದಿನ್, ಅಕೌಂಟೆಂಟ್ ರಾಮನಗೌಡ ಪಾಟೀಲ,

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಶೀಲ್ಪಾ ಹೀರೆಮಠ, ಸದಸ್ಯರಾದ ಕಮಲಾ ಮಕಾಳಿ, ಕಸ್ತೂರಿ ಪೂಜಾರಿ, ಚಂದ್ರಶೇಖರ ಕರಿಗಾರ, ಸಿದ್ದಪ್ಪ ಕುಂಬಾರ, ಮೋತಿಲಾಲ ಲಮಾಣಿ, ಸಿಂಕದರ ಪತ್ತೆಮಮ್ಮದ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಹಲಸಂಗಿ ಕ್ರಾಸ್ ಸಮೀಪ ವ್ಯಕ್ತಿಯ ಕೊಲೆ! :ಅಕ್ಕನ ಮೇಲೆ ಶಂಕೆ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ವಿಜಯಪುರ ಜಿಲ್ಲೆಯ ಚಡಚಣ ತಾಲೂಕಿನ ಹಲಸಂಗಿ ಕ್ರಾಸ್ ಸಮೀಪ ರಾಷ್ಟ್ರೀಯ ಹೆದ್ದಾರಿ ಬಳಿ ಶನಿವಾರ ಸಂಜೆ ನಡೆದ ಜಗಳದಲ್ಲಿ 35 ವರ್ಷದ ವ್ಯಕ್ತಿಯೊಬ್ಬರು ಮೃತಪಟ್ಟಿರುವ ಘಟನೆ ನಡೆದಿದೆ. ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ಅಕ್ಕನೇ ತನ್ನ ಸ್ವಂತ ತಮ್ಮನನ್ನು ಭೀಕರವಾಗಿ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ.

ಹಲಸಂಗಿ ಗ್ರಾಮದ ಬಾಬುಸಾ(ಬಾಬುರಾವ್) ಮಹಾದೇವ ಜಮಾದಾರ (35) ಕೊಲೆಯಾದ ದುರ್ದೈವಿ. ಅವರೊಂದಿಗೆ ಬಂದಿದ್ದ ಸೋಲಾಪುರ ಮೂಲದ ವ್ಯಕ್ತಿ ಅಪ್ಪಾಸಾಹೇಬ ಮಕಾಶಿ ಎಂಬುವವರಿಗೂ ಗಂಭೀರ ಗಾಯಗಳಾಗಿದ್ದು, ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಸೋಲಾಪುರ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ತಿಳಿದುಬಂದಿದೆ.

ಘಟನೆಯ ಹಿನ್ನೆಲೆ: ಮೃತ ಬಾಬುಸಾ(ಬಾಬುರಾವ್) ಅವರಿಗೆ ಐದು ವರ್ಷಗಳ ಹಿಂದೆ ಅವರ ಸ್ವಂತ ಅಕ್ಕ ಮೀನಾಕ್ಷಿ ಭತಗುಣಕಿ(ತಳವಾರ) ತನ್ನ ಮಗಳು ಸತ್ಯವ್ವಳನ್ನು ಕೊಟ್ಟು ಮದುವೆ ಮಾಡಿಸಿದ್ದರು. ಆದರೆ, ಮದುವೆಯಾದಾಗಿನಿಂದಲೂ ಗಂಡ ಬಾಬುಸಾ(ಬಾಬುರಾವ್) ಹಾಗೂ ಹೆಂಡತಿ ಸತ್ಯವ್ವ ನಡುವೆ ಸಣ್ಣಪುಟ್ಟ ವಿಷಯಗಳಿಗೆ ಜಗಳ ನಡೆಯುತ್ತಿತ್ತು ಎನ್ನಲಾಗಿದೆ. ಶನಿವಾರ ಸಂಜೆ ಬಾಬುಸಾ(ಬಾಬುರಾವ್) ಅವರು ಹಲಸಂಗಿ ಕ್ರಾಸ್ ಬಳಿ ಇರುವ ಅಕ್ಕ ಮೀನಾಕ್ಷಿ ಅವರ ಮನೆಗೆ ಹೋಗಿದ್ದ. ಈ ಸಂದರ್ಭದಲ್ಲಿ ಮತ್ತೊಮ್ಮೆ ಕೌಟುಂಬಿಕ ಕಲಹ ತಾರಕಕ್ಕೇರಿದೆ. ಈ ವೇಳೆ ಆಕ್ರೋಶಗೊಂಡ ವಿಕಾಸ್ ಹಾಗೂ ಅಕ್ಕ ಮೀನಾಕ್ಷಿ ಹಾಗೂ ಕುಟುಂಬದವರು ತಮ್ಮನ ಮೇಲೆಯೇ ಹಲ್ಲೆ ನಡೆಸಿದ್ದು, ಪರಿಣಾಮ ಬಾಬುಸಾ(ಬಾಬುರಾವ್) ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಈ ಘಟನೆಗೆ ಸಂಬಂಧಿಸಿದಂತೆ ಝಳಕಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಡಿಎಸ್ಪಿ ಸುಲ್ಪಿ, ಸಿಪಿಐ ಪರುಶುರಾಮ ಮನಗೂಳಿ, ಪಿಎಸ್‌ಐ ಮಂಜುನಾಥ ತಿರಕನ್ನವರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಘಟನೆಯ ನಿಖರ ಕಾರಣ ತಿಳಿಯಲು ತನಿಖೆ ಮುಂದುವರಿದಿದೆ.

### ಸಿಂದಗಿಯಲ್ಲಿ ಕನ್ನಡ ಸಾಹಿತ್ಯ ಗೆಳೆಯರ ಬಳಗದಿಂದ ಎಸ್.ಜಾನಕಿ ಅವರ ಶ್ರದ್ಧಾಂಜಲಿ ಸಭೆ

# ಗಾನಕೋಗಿಲೆ ಎಸ್.ಜಾನಕಿ ನಿಧನದಿಂದ ಸಂಗೀತ ಲೋಕಕ್ಕೆ ನಷ್ಟ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ಭಾರತೀಯ ಚಿತ್ರರಂಗದ ಗಾನ ಕೋಗಿಲೆ, ಕೋಟ್ಯಂತರ ಸಂಗೀತಾಭಿಮಾನಿಗಳ ಮನಸೂರೆಗೊಂಡ ಹಿನ್ನೆಲೆ ಗಾಯಕಿ ಎಸ್. ಜಾನಕಿ ಅವರ ನಿಧನ ಭಾರತೀಯ ಸಂಗೀತ ಲೋಕಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಕನ್ನಡ ಸಾಹಿತ್ಯ ಗೆಳೆಯರ ಬಳಗದ ಅಧ್ಯಕ್ಷ ರಾಜಶೇಖರ ಕೂಚಬಾಳ ಹೇಳಿದರು.

ಸಿಂದಗಿ ನಗರದ ಬಸವೇಶ್ವರ ವೃತ್ತದ ಹತ್ತಿರವಿರುವ ಕುಮಾರ ಕಂಪ್ಯೂಟರ ತರಬೇತಿ ಕೇಂದ್ರದಲ್ಲಿ ಹಮ್ಮಿಕೊಂಡ ವಾಗ್ದೇವಿ ಪುತ್ರಿ ಎಸ್ ಜಾನಕಿ ಅವರ ಶ್ರದ್ಧಾಂಜಲಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ದಶಕಗಳ ಕಾಲ ತಮ್ಮ ಅಪರೂಪದ ಕಂಠಸಿರಿಯ ಮೂಲಕ ಕನ್ನಡ ಸೇರಿದಂತೆ ದಕ್ಷಿಣ ಭಾರತದ ಎಲ್ಲಾ ಪ್ರಮುಖ ಭಾಷೆಗಳಲ್ಲಿಯೂ ಹಾಗೂ ಹಿಂದಿಯಲ್ಲಿಯೂ ಸಾವಿರಾರು ಅಮರ ಗೀತೆಗಳನ್ನು ಹಾಡಿದ ಅವರು, ಭಾರತೀಯ ಸಂಗೀತ ಕ್ಷೇತ್ರದ ಧ್ರುವತಾರೆಯಾಗಿ ಸದಾ ನೆನಪಿನಲ್ಲಿ ಉಳಿಯಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ಸಿಂದಗಿ ಶಿಕ್ಷಣ ಸುಧಾರಣಾ ಸಮಿತಿ ಸದಸ್ಯ ಸಿದ್ದಲಿಂಗ ಚೌದರಿ ಅವರು, ಸೂರ್ಯ-ಚಂದ್ರ ಇರುವವರೆಗೂ ಅವರ ಸಾಧನೆಯನ್ನು ಸಂಪೂರ್ಣವಾಗಿ ಕೊಂಡಾಡಲು ಸಾಧ್ಯವಿಲ್ಲ ಎನ್ನುವಷ್ಟು ಅವರ ಪ್ರತಿಭೆ ಅಸಾಧಾರಣವಾಗಿತ್ತು.

ಸರಸ್ವತಿಯ ವರಪುತ್ರಿಯಾಗಿದ್ದ ಎಸ್. ಜಾನಕಿ ಅವರು ದಣಿವರಿಯದ ಕಲಾವಿದೆಯಾಗಿ ಎಲ್ಲ ಪ್ರಮುಖ ಸಂಗೀತ ನಿರ್ದೇಶಕರು ಹಾಗೂ ಬಹುತೇಕ ಎಲ್ಲ ಖ್ಯಾತ ಹಿನ್ನೆಲೆ ಗಾಯಕರೊಂದಿಗೆ ಯುಗಯುಗಾಂತರಗಳವರೆಗೆ ಉಳಿಯುವ ಗೀತೆಗಳನ್ನು ನೀಡಿದ ಕೀರ್ತಿಗೆ ಪಾತ್ರರಾಗಿದ್ದಾರೆ. ಅವರ ಗಾಯನ ಭಾರತೀಯ ಸಂಗೀತ ಪರಂಪರೆಯ ಅಮೂಲ್ಯ ಸಂಪತ್ತಾಗಿದೆ ಎಂದರು.

ಜಿಪಿ ಪೋರವಾಲ ಕಾಲೇಜಿನ ದೈಹಿಕ ನಿರ್ದೇಶಕ ರವಿ ಗೋಲಾ ಮಾತನಾಡಿ, ಸರಳತೆ, ಸೌಜನ್ಯ ಮತ್ತು ವಿನಯಶೀಲತೆಯ ಸಾಕಾರಮೂರ್ತಿಯಾಗಿದ್ದ ಎಸ್. ಜಾನಕಿ ಅವರು ಕನ್ನಡ ನಾಡಿನೊಂದಿಗೆ ವಿಶೇಷ ಆತ್ಮೀಯತೆ ಹೊಂದಿದ್ದರು. ಕನ್ನಡದಲ್ಲಿ ಅವರು ಹಾಡಿದ ನೂರಾರು ಗೀತೆಗಳು ಇಂದಿಗೂ ಸಂಗೀತಾಸಕ್ತರ ಹೃದಯದಲ್ಲಿ ಅಚ್ಚಳಿಯದೆ ಉಳಿದಿವೆ ಎಂದು ಸ್ಮರಿಸಿದರು.

ಸಿಂದಗಿ ಉಪನ್ಯಾಸಕರ ಸಂಘದ ಅಧ್ಯಕ್ಷ ಸಿದ್ದಲಿಂಗ ಕಿಣಗಿ ಮಾತನಾಡಿ, ಎಸ್.ಜಾನಕಿ ಅವರು ಕರುನಾಡನ್ನು ತಮ್ಮ ಕಲಾ ಸೇವೆಯ ಪ್ರಮುಖ ನೆಲೆಯಾಗಿ ಆರಿಸಿಕೊಂಡಿದ್ದು ಕನ್ನಡಿಗರಿಗೆ ಹೆಮ್ಮೆಯ ವಿಷಯವಾಗಿದೆ.


ಅವರ ಅಗಲಿಕೆಯೊಂದಿಗೆ ಭಾರತೀಯ ಚಿತ್ರರಂಗವು ಅಪರೂಪದ ಗಾನಮಣಿಯನ್ನು ಕಳೆದುಕೊಂಡಿದೆ ಎಂದರು.

ಈ ಸಂದರ್ಭದಲ್ಲಿ ಸಿದ್ದು ಚಿಂಚೋಳಿ, ರಾಗರಂಜನೀ ಸಂಗೀತ ಅಕಾಡೆಮಿಯ ಸಂಚಾಲಕ ಪ್ರಕಾಶ , ಶಿಕ್ಷಕ ಬಿ ವಿ ಹಿರೇಮಠ, ಸತೀಶ್ ಹಿರೇಮಠ, ಜಗದೀಶ್ ಪಾಟೀಲ, ಚೇತನ ಲೋಣಿ, ಶಿವಲಿಂಗ ಉಮ್ಮರಗಿ , ಬುಳ್ಳಪ್ಪ ಡಿ, ಸುಭಾಷ್ ಪಾಟೀಲ, ಸೇರಿದಂತೆ ಮತ್ತತರು ಉಪಸ್ಥಿತರಿದ್ದರು.

### ರೈತರ ಜಮೀನಿನಲ್ಲೇ ರಸ್ತೆ ಕಾಮಗಾರಿ? । ಕೂಡಲೇ ಎಚ್ಚೆತ್ತುಕೊಳ್ಳದಿದ್ದಲ್ಲಿ ಹೋರಾಟದ ಎಚ್ಚರಿಕೆ

# ಗಡಿ ಗುರುತಿಸದೇ ಅಕ್ರಮ ಲೈನ್‌ಔಟ್ :ರೈತರ ಆರೋಪ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ತಾಲೂಕಿನ ಬಿದರಕುಂದಿ ತಾರನಾಳ ರಸ್ತೆ ಕಾಮಗಾರಿ ವೇಳೆ ಬಿದರಕುಂದಿ ಹಾಗೂ ಕುಂಟೋಜಿ ಗ್ರಾಮಗಳ ಗಡಿಯನ್ನು ಸಮರ್ಪಕವಾಗಿ ಗುರುತಿಸದೇ ಕಾಮಗಾರಿ ಆರಂಭಿಸಿರುವ ಪರಿಣಾಮ ಹಲವು ರೈತರ ಜಮೀನಿಗೆ ಅತಿಕ್ರಮಣವಾಗಿದೆ ಎಂದು ಬಾಧಿತ ರೈತರು ತೀವ್ರ ಆಕ್ರೋಶ ವ್ಯಕ್ತಪಡಿಸಿ, ಕೂಡಲೇ ಸಂಬಂಧಪಟ್ಟ ಅಧಿಕಾ-ರಿಗಳು ಸ್ಥಳಕ್ಕೆ ಭೇಟಿ ನೀಡಿ ಗಡಿ ಗುರುತಿಸಿ ರೈತರಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ರೈತರಾದ ಶಿವಣ್ಣ ಚಿರಲದಿನ್ನಿ, ಶ್ರೀಕಾಂತ ಕಡೂರ, ಲಕ್ಷ್ಮಣ ಕಡೂರ, ಶಾಂತಗೌಡ ಬಿರಾದಾರ ಹಾಗೂ ಸಂಗಪ್ಪ ಸರೂರ ಮಾತನಾಡಿ, ಈಗಾಗಲೇ ಮಳೆ ಕೊರತೆ ಹಾಗೂ ಬೆಳೆ ಹಾನಿಯಿಂದ ಸಂಕಷ್ಟದಲ್ಲಿರುವ ರೈತರಿಗೆ ಇದೀಗ ರಸ್ತೆ ಕಾಮಗಾರಿಯಿಂದ ಮತ್ತಷ್ಟು ತೊಂದರೆ ಉಂಟಾಗಲಿದೆ ಎಂದು ಆರೋಪಿಸಿದರು. ಕಾಮಗಾರಿ ಆರಂಭಿಸುವ ಮೊದಲು ಕಂದಾಯ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಸಮ್ಮುಖದಲ್ಲಿ ಗ್ರಾಮಗಳ ಗಡಿ ಹಾಗೂ ಜಮೀನುಗಳ ಗಡಿಯನ್ನು ನಿಖರವಾಗಿ ಗುರುತಿಸಬೇಕಾಗಿತ್ತು. ಆದರೆ ಯಾವುದೇ ಪೂರ್ವ ಸರ್ವೆ ನಡೆಸದೇ, ರೈತರಿಗೆ ಮಾಹಿತಿ ನೀಡದೇ ಮತ್ತು ನೋಟಿಸ್ ಜಾರಿ ಮಾಡದೇ ಏಕಾಏಕಿ ಹೊಲಗಳಿಗೆ ನುಗ್ಗಿ ರಸ್ತೆಗಾಗಿ ಲೈನ್‌ಔಟ್ ಹಾಕಲಾಗಿದೆ ಎಂದು ದೂರಿದರು. ಈ ಬಗ್ಗೆ ಪ್ರಶ್ನಿಸಲು ಹೋದಾಗ ಗುತ್ತಿಗೆದಾರರ ಸಿಬ್ಬಂದಿ ಹಾಗೂ ಸಂಬಂಧಪಟ್ಟವರು ರೈತರೊಂದಿಗೆ ಅಸಭ್ಯವಾಗಿ ವರ್ತಿಸಿ, ಬೆದರಿಕೆ ಹಾಕುತ್ತಿರುವುದಾಗಿ ಆರೋಪಿಸಿದರು.

ತಮ್ಮ ಹಕ್ಕಿನ ಜಮೀನನ್ನು ರಕ್ಷಿಸಿಕೊಳ್ಳಲು ಮುಂದಾದ ರೈತರನ್ನೇ ಅವಾಚ್ಯ ಶಬ್ದಗಳಿಂದ ನಿಂದಿಸಿ, ಮಾನಸಿಕ ಒತ್ತಡಕ್ಕೆ ಒಳಪಡಿಸಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಾವು ಅಭಿವೃದ್ಧಿ ಕಾಮಗಾರಿಗಳಿಗೆ ವಿರೋಧಿಗಳಲ್ಲ.ಆದರೆ ರೈತರ ಜಮೀನಿಗೆ ಅನ್ಯಾಯವಾಗದಂತೆ ಕಾನೂನುಬದ್ಧವಾಗಿ ಗಡಿ ಗುರುತಿಸಿ, ಸೂಕ್ತ ಪರಿಹಾರ ಹಾಗೂ ಅಗತ್ಯ ಕ್ರಮಗಳನ್ನು ಕೈಗೊಂಡ ಬಳಿಕವೇ ಕಾಮಗಾರಿ ನಡೆಸಬೇಕು. ರೈತರ ಹಿತಾಸಕ್ತಿಯನ್ನು ಕಡೆಗಣಿಸಿ ಏಕಪಕ್ಷೀಯವಾಗಿ ಕಾಮಗಾರಿ ನಡೆಸುವುದು ಸರಿಯಲ್ಲ" ಕೂಡಲೇ ಜಿಲ್ಲಾಡಳಿತ, ಕಂದಾಯ ಇಲಾಖೆ, ಲೋಕೋಪಯೋಗಿ ಇಲಾಖೆ ಹಾಗೂ ಸಂಬಂಧಿಸಿದ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಜಮೀನುಗಳ ಗಡಿಯನ್ನು ವೈಜ್ಞಾನಿಕವಾಗಿ ಗುರುತಿಸಿ, ರೈತ-ರಿಗೆ ಆಗುತ್ತಿರುವ ಅನ್ಯಾಯವನ್ನು ತಡೆಹಿಡಿಯಬೇಕು ಎಂದು ಆಗ್ರಹಿಸಿದರು.

ಈ ಸಮಸ್ಯೆಯನ್ನು ಕೂಡಲೇ ಬಗೆಹರಿಸದಿದ್ದಲ್ಲಿ ಬಿದರಕುಂದಿ, ಕುಂಟೋಜಿ ಸೇರಿದಂತೆ ಸುತ್ತಮುತ್ತಲಿನ ರೈತರೆಲ್ಲ ಒಗ್ಗೂಡಿ ಸಂಬಂಧಿಸಿದ ಇಲಾಖೆಯ ಕಚೇರಿ ಎದುರು ಉಗ್ರ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ರೈತರು ಎಚ್ಚರಿಕೆ ನೀಡಿದ್ದಾರೆ.

ಈ ವೇಳೆ ಕಾರ್ತಿಕ ನಾಯಕ, ಭೀಮಣ್ಣ ಸುತುಗುಂಡರ, ಬಸಪ್ಪ ಬಿಜ್ಜೂರ, ಮುರಿಗೆಪ್ಪ ಕಡೂರ ಮತ್ತೀತರರು ಇದ್ದರು.

### ತಮ್ಮ ಬಾಳು ಬಂಗಾರವಾಗಲು ಕಾರಣರಾದ ನೆಚ್ಚಿನ ನಾಯಕನ ಹೆಸರನ್ನು ಶಾಶ್ವತವಾಗಿ ಸ್ಮರಿಸುವ ಕಾರ್ಯ ಮಾಡಿದ ಅವಿಭಕ್ತ ಹಿರೇಮಠ ಕುಟುಂಬ

# ಸಚಿವ ಎಂ.ಬಿ.ಪಾಟೀಲ ಹೆಸರು ತಮ್ಮ ಮನೆಗಿಟ್ಟು ಅಭಿಮಾನ ಮೆರೆದ ಕುಟುಂಬ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬರದ ನಾಡಿನಲ್ಲಿ ಬಾಳು ಬಂಗಾರವಾಗಲು ಕಾರಣರಾದ ನೆಚ್ಚಿನ ನಾಯಕನ ಹೆಸರನ್ನು ತಮ್ಮ ಮನೆಗೆ ಇಡುವ ಮೂಲಕ ಅವಿಭಕ್ತ ಕುಟುಂಬವೊಂದು ಹೃದಯಸ್ಪರ್ಷಿ ಕಾರ್ಯ ಮಾಡಿದೆ.

ಅಷ್ಟೇ ಅಲ್ಲ, ರವಿವಾರ ಅದ್ದೂರಿಯಾಗಿ ವಾಸ್ತು ಶಾಂತಿ ಮತ್ತು ಗೃಹ ಪ್ರವೇಶ ಪೂಜೆ ಮಾಡಿ ಅತಿಥಿ ಗಣ್ಯರನ್ನು ಆಮಂತ್ರಿಸಿ ಸತ್ಕಾರ ಮಾಡುವ ಮೂಲಕ ಕೃತಜ್ಞತೆ ಸಲ್ಲಿಸಿದ್ದಾರೆ.

ತಿಕೋಟಾ ತಾಲೂಕಿನ ಸೋಮದೇವರಹಟ್ಟಿ ಗ್ರಾಮದ 30 ಸದಸ್ಯರನ್ನು ಹೊಂದಿರುವ ಅವಿಭಕ್ತ ಹಿರೇಮಠ ಕುಟುಂಬದ ಸಹೋದರರಾದ ಸಿದ್ದಯ್ಯ, ಸಾತಯ್ಯ, ಬಸಯ್ಯ ಹಾಗೂ ಮಲ್ಲಯ್ಯ ವಿಜಯಪುರ ನಗರದ ಅಥಣಿ ರಸ್ತೆಯಲ್ಲಿರುವ ರಾಜಕುಮಾರ ಲೇಔಟ್ ನ ಸುವರ್ಣ ನಗರದಲ್ಲಿ ಸುಮಾರು ಬೃಹತ್ ಮನೆ ನಿರ್ಮಿಸಿದ್ದಾರೆ. ಅಲ್ಲದೇ, ಈ ಮನೆಗೆ ತಮ್ಮ ಬಾಳು ಹಸನಾಗಲು ಕಾರಣರಾದ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರ ಹೆಸರನ್ನು ನಾಮಕರಣ ಮಾಡುವ ಮೂಲಕ ಮನದಲ್ಲಷ್ಟೇ ಅಲ್ಲ ಮನೆಯಲ್ಲೂ ನೆಚ್ಚಿನ ನಾಯಕನ ಹೆಸರು ಅಜರಾಮರವಾಗುವಂತೆ ಮಾಡಿದ್ದಾರೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ಹಿರೇಮಠ ಸಹೋದರರು, ಸೋಮದೇವರಹಟ್ಟಿಯಲ್ಲಿ ನಮ್ಮ ಕುಟುಂಬಕ್ಕೆ ಸೇರಿದ 40 ಎಕರೆ ಜಮೀನಿದೆ. ಒಣಬೇಸಾಯ ಮಾಡುತ್ತಿದ್ದ ನಮಗೆ ವರುಣ ದೇವ ಕೃಪೆ ತೋರಿದರೆ ಬೆಳೆ ಬರುತ್ತಿತ್ತು. ಆ ಬೆಳೆಯೂ ಕೂಡ ನಮ್ಮ ಕುಟುಂಬ ನಿರ್ವಹಣೆಗೆ ಮಾತ್ರ ಸಾಲುತ್ತಿತ್ತು. ಆದರೆ, 2013-18ರ ಅವಧಿಯಲ್ಲಿ ಜಲಸಂಪನ್ಮೂಲ ಸಚಿವರಾದ ಎಂ. ಬಿ. ಪಾಟೀಲ ಅವರು ಕೈಗೊಂಡ ಜಲಕ್ರಾಂತಿಯಿಂದಾಗಿ ನಮ್ಮ ಹೊಲಗಳಿಗೆ ನೀರು ಬಂತು. ಒಣಬೇಸಾಯದ ಜಮೀನು ನೀರಾವರಿ ಭೂಮಿಯಾಗಿ ಮೇಲ್ದರ್ಜೆಗೇರಿತು. ಪರಿಣಾಮ ನಾವು ಎಲ್ಲ ಜಮೀನಿನಲ್ಲಿ ಉತ್ಕೃಷ್ಠ ಗುಣಮಟ್ಟದ ದ್ರಾಕ್ಷಿ ಬೆಳೆಯಲಾರಂಭಿಸಿದೆವು. ದ್ರಾಕ್ಷಿಯನ್ನು ಒಣದ್ರಾಕ್ಷಿ(ಮನುಕ) ಮಾಡಿದೆವು. ಸುಮಾರು 100 ಟನ್ ಒಣ ದ್ರಾಕ್ಷಿ ಮಾಡುತ್ತಿದ್ದೇವೆ. ಎರಡು ವರ್ಷಗಳ ಹಿಂದೆ ಒಣದ್ರಾಕ್ಷಿ ರೂ. 1.50 ಕೋ. ಇದ್ದ ಆದಾಯ ಈಗ ರೂ. 3.50 ರಿಂದ ರೂ. 4 ಕೋ. ವರೆಗೆ ತಲುಪಿದೆ. ಆರ್ಥಿಕವಾಗಿ ನಾವು ಸ್ವಾವಲಂಬಿಯಾಗಲು ಆಧುನಿಕ ಭಗೀರಥ ಎಂ. ಬಿ. ಪಾಟೀಲ ಅವರೇ ಕಾರಣ. ಅವರ ಋಣವನ್ನು ತೀರಿಸಲು ಆಗುವುದಿಲ್ಲ. ಅವರ ಹೆಸರು ಕೇವಲ ನಮ್ಮ ಮನಸ್ಸಿನಲ್ಲಿ ಇರಬಾರದು. ನಮ್ಮ ಮನೆಗೂ ಇರಬೇಕು ಎಂಬ ಸದುದ್ದೇಶದಿಂದ ನಮ್ಮ ನೂತನ ಮನೆಗೆ ಶ್ರೀ ಎಂ. ಬಿ. ಪಾಟೀಲ ನಿಲಯ ಎಂದು ಹೆಸರು ಇಟ್ಟಿದ್ದೇವೆ. ನಮ್ಮ ಜೀವನದ ಸಾರ್ಥಕ ಕ್ಷಣಗಳಲ್ಲಿ ಇದು ಅತೀ ಮುಖ್ಯವಾಗಿದೆ ಎಂದು ಹೇಳಿದರು.




ರೈತರ ಹೆಮ್ಮೆಯ ಕಾರ್ಯದ ಕುರಿತು ಪ್ರತಿಕ್ರಿಯೆ ನೀಡಿರುವ ಸಚಿವ ಎಂ. ಬಿ. ಪಾಟೀಲ, ಅನ್ನದಾತನ ಕನಸಿನ ಮನೆಯ ಮೇಲೆ ನನ್ನ ಹೆಸರು ಹಾಕಿದ್ದಾರೆ. ಇದು ನನಗೆ ಸಿಕ್ಕ ಅಪೂರ್ವ ಗೌರವ. ಈ ಸುದ್ದಿ ಮನಸ್ಸನ್ನು ಭಾವುಕವಾಗಿಸಿದೆ. ಇದು ಕೇವಲ ನನ್ನ ಹೆಸರಲ್ಲ. ಇದು ರೈತರ ಪ್ರೀತಿ, ವಿಶ್ವಾಸ ಮತ್ತು ಕೃತಜ್ಞತೆಯ ಸಂಕೇತ. ನಾವು ಮಾಡಿದ ಕೆಲಸವನ್ನು ಮರೆಯುವವರೇ ಹೆಚ್ಚು ಎನ್ನುವ ಕಾಲದಲ್ಲಿ, ನಮ್ಮ ರೈತರು ಮಾತ್ರ ತಾವು ಬೆಳೆದ ಹಣ್ಣು, ತರಕಾರಿ, ಹಾಲು ತಂದು ಪ್ರೀತಿಯಿಂದ ನೀಡುತ್ತಾರೆ. ಈಗ ತಮ್ಮ ಕನಸಿನ ಮನೆಗೂ ನನ್ನ ಹೆಸರಿಟ್ಟಿದ್ದಾರೆ. ಇದಕ್ಕಿಂತ ದೊಡ್ಡ ಗೌರವ ಮತ್ತೊಂದಿಲ್ಲ. ವಿಜಯಪುರ ನಗರದಲ್ಲಿ ಮನೆ ನಿರ್ಮಿಸಿದ ತಿಕೋಟಾ ತಾಲ್ಲೂಕಿನ ಸೋಮದೇವರಹಟ್ಟಿಯ ಸಿದ್ದಯ್ಯ, ಸಾತಯ್ಯ, ಬಸಯ್ಯ ಮತ್ತು ಮಲ್ಲಯ್ಯ ಅವರ ಅವಿಭಕ್ತ ಕುಟುಂಬಕ್ಕೆ ಹೃತ್ಪೂರ್ವಕ ಧನ್ಯವಾದಗಳು ಎಂದು ತಿಳಿಸಿದ್ದಾರೆ.

ಒಂದು ಕಾಲದಲ್ಲಿ ಬರಗಾಲದಿಂದ ತತ್ತರಿಸಿದ್ದ ಈ ನೆಲದಲ್ಲಿ, ಇಂದು ರೈತರು ಕೋಟಿ ರೂಪಾಯಿಗಳ ಆದಾಯ ಗಳಿಸುವ ಮಟ್ಟಿಗೆ ಬೆಳೆದಿದ್ದಾರೆ. ಅದಕ್ಕೆ ನಾವು ಮುತುವರ್ಜಿ ವಹಿಸಿ ಜಾರಿಗೊಳಿಸಿದ ನೀರಾವರಿ ಯೋಜನೆಗಳ ಕೊಡುಗೆ ಮಹತ್ವದ್ದಾಗಿದೆ. ಅನ್ನದಾತನ ಈ ಯಶಸ್ಸು ಮತ್ತು ಕೃತಜ್ಞತೆಯ ಭಾವನೆ ಇನ್ನಷ್ಟು ಸೇವೆ ಮಾಡುವ ಜವಾಬ್ದಾರಿಯನ್ನು ನನ್ನ ಮೇಲೆ ಹೆಚ್ಚಿಸುತ್ತದೆ. ಇದು ಕೇವಲ ಒಬ್ಬ ರೈತನ ಯಶಸ್ಸಲ್ಲ, ನೀರಾವರಿ, ಶ್ರಮ, ಸಂಕಲ್ಪ ಮತ್ತು ವಿಶ್ವಾಸ ಒಂದಾದಾಗ ಸಾಧ್ಯವಾಗುವ ಪರಿವರ್ತನೆಯ ಜೀವಂತ ಸಾಕ್ಷಿ. ಈ ಪ್ರೀತಿ ನನ್ನನ್ನು ಮತ್ತಷ್ಟು ಜವಾಬ್ದಾರಿಯುತವಾಗಿ ಕೆಲಸ ಮಾಡಲು ಪ್ರೇರೇಪಿಸುತ್ತದೆ. ರೈತರ ಬದುಕು ಇನ್ನಷ್ಟು ಹಸನಾಗುವವರೆಗೆ, ಅವರ ಮಕ್ಕಳ ಭವಿಷ್ಯ ಇನ್ನಷ್ಟು ಉಜ್ವಲವಾಗುವವರೆಗೆ ನನ್ನ ಸೇವೆಯ ಪಯಣ ನಿರಂತರವಾಗಿರಲಿದೆ ಎಂದು ಸಚಿವರು ಪ್ರತಿಕ್ರಿಯೆ ನೀಡಿದ್ದಾರೆ.

ಮನೆಯ ವಾಸ್ತು ಶಾಂತಿ ಮತ್ತು ಗೃಹಪ್ರವೇಶಕ್ಕೆ ಆಗಮಿಸಿದ ವಿಧಾನ ಪರಿಷತ್ ಶಾಸಕ ಸುನೀಲಗೌಡ ಪಾಟೀಲ, ಕರ್ನಾಟಕ ವನ್ಯಜೀವಿ ಮಂಡಳಿ ಸದಸ್ಯ ಹಾಗೂ ಸೊಸೈಟಿ ಫಾರ್ ಪ್ರೊಟೆಕ್ಷನ್ ಆಫ್ ಪ್ಲಾಂಟ್ಸ್ ಅಂಡ್ ಎನಿಮಲ್ಸ್ ಅಧ್ಯಕ್ಷ ಧ್ರುವ ಎಂ. ಪಾಟೀಲ, ತಿಕೋಟಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿದ್ದು ಗೌಡನವರ, ಮುಖಂಡರಾದ ಡಾ.ಮಹಾಂತೇಶ ಬಿರಾದಾರ,

ಚೆನ್ನೈ ಬೆಂಗಳೂರು ಇಂಡಸ್ಟ್ರಿಯಲ್ ಕಾರಿಡಾರ(ಸಿಬಿಐಸಿ ಟಿಐಟಿಎಲ್) ಎಕ್ಸಿಕ್ಯೂಟಿವ್ ಎಂಜಿನಿಯರ್ ರಾಜಕುಮಾರ ಸಿದ್ರಾಮ ಕುಮಾನಿ, ಮುಖಂಡರಾದ ಜಕ್ಕಪ್ಪ ಯಡವೆ, ಗುರು ಮಾಳಿ, ಸೋಮನಾಥ ಬಾಗಲಕೋಟ, ವಿ. ಎಸ್.ಪಾಟೀಲ, ಧರ್ಮಣ್ಣ ಬಿಳೂರ, ಚನ್ನಪ್ಪ ಕೊಪ್ಪದ, ಗುರು ಮುಚ್ಚಂಡಿ, ನಿಂಗನಗೌಡ ಬಿರಾದಾರ, ಮಹಾಂತೇಶ ಹಾದಿಮನಿ, ಶ್ರೀಶೈಲ ತುಳಜಣ್ಣವರು, ಅನೀಲ ಹಿರೇಮಠ ಮುಂತಾದವರು ಹಿರೇಮಠ ಸಹೋದರರಿಗೆ ಶುಭ ಹಾರೈಸಿದರು.

99 ಕೆಲಸ ಮಾಡಿದರೂ ಒಂದು ಕೆಲಸವಾಗದಿದ್ದರೆ ನಾಯಕರನ್ನು ದೂರುವ ಇಂದಿನ ದಿನಗಳಲ್ಲಿ ನೀರಾವರಿ ಮೂಲಕ ಅನ್ನದಾತರ ಬಾಳನ್ನು ಬಂಗಾರವಾಗಿಸಿದ ನಾಯಕನ ಹೆಸರನ್ನು ತಮ್ಮ ಹೊಸ ಮನೆಗೆ ಇಡುವ ಮೂಲಕ ಸೋಮದೇವರಹಟ್ಟಿ ಹಿರೇಮಠ ಸಹೋದರರು ಉಪಕಾರ ಮಾಡಿದವರ ಹೆಸರನ್ನು ಮನಸ್ಸಿನಲ್ಲಷ್ಟೇ ಅಲ್ಲ, ಭೌತಿಕವಾಗಿಯೂ ಶಾಶ್ವತವಾಗಿಡುವ ಕೆಲಸ ಮಾಡಿದ್ದಾರೆ.

## ಸರ್ಕಾರ ರೈತರ ಸಾಲ ಮನ್ನಾ ಮಾಡಿ ಬರಗಾಲವೆಂದು ಘೋಷಿಸಲಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಮಳೆಯ ಕೊರತೆಯಿಂದ ತೀವ್ರ ಹಾನಿಗೊಳಗಾದ ಪ್ರದೇಶಗಳನ್ನು ತಕ್ಷಣವೇ ಬರಪೀಡಿತ ಪ್ರದೇಶಗಳೆಂದು ಘೋಷಿಸಿ, ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು. ಬೆಳೆ ಹಾನಿಗೆ ಸೂಕ್ತ ಪರಿಹಾರ, ರೈತರಿಗೆ ಉಚಿತ ಮೇವು ಹಾಗೂ ಕುಡಿಯುವ ನೀರಿನ ವ್ಯವಸ್ಥೆ, ಕೃಷಿ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಪೂರೈಕೆ, ಬೆಳೆ ವಿಮೆ ಮೊತ್ತವನ್ನು ಶೀಘ್ರದಲ್ಲಿ ವಿತರಣೆ ಹಾಗೂ ಅಗತ್ಯ ಕೃಷಿ ಸಹಾಯಧನ ನೀಡುವಂತೆ ಸರ್ಕಾರಕ್ಕೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ ಅಧ್ಯಕ್ಷ ಬಸವರಾಜ ರಂಜುಣಗಿ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು, ರಾಜ್ಯದ ವಿವಿಧ ಭಾಗಗಳಲ್ಲಿ ಮಳೆಯ ಕೊರತೆ ಹಾಗೂ ಕೃಷಿ ಚಟುವಟಿಕೆಗಳಿಗೆ ಉಂಟಾಗಿರುವ ತೀವ್ರ ಸಂಕಷ್ಟದಿಂದ ರೈತರು ಸಂಕಷ್ಟದ ಜೀವನ ನಡೆಸುತ್ತಿದ್ದಾರೆ. ಬೆಳೆ ನಷ್ಟ, ನೀರಿನ ಅಭಾವ ಮತ್ತು ಉತ್ಪಾದನಾ ವೆಚ್ಚದ ಏರಿಕೆಯಿಂದ ರೈತರು ಆರ್ಥಿಕವಾಗಿ ತೀವ್ರ ಹಿನ್ನಡೆ ಅನುಭವಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ರೈತರ ಕೃಷಿ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು. ರೈತರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರಗಳು ತುರ್ತು ಕ್ರಮಕೈಗೊಂಡು, ಸಂಕಷ್ಟದಲ್ಲಿರುವ ರೈತರಿಗೆ ಆರ್ಥಿಕ ನೆರವು ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ.

### ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ । ಚುನಾವಣಾಧಿಕಾರಿ & ಜಿಲ್ಲಾಧಿಕಾರಿ ಡಾ. ಆನಂದ ಕೆ ಮಾಹಿತಿ

## ವಿಜಯಪುರ ಜಿಲ್ಲೆಯಲ್ಲಿ 18,88,657 ಗಣತಿ ನಮೂನೆ ವಿತರಣೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯಾದ್ಯಂತ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಪ್ರಗತಿಯಲ್ಲಿದೆ. ಮತಗಟ್ಟೆ ಮಟ್ಟದ ಅಧಿಕಾರಿಗಳು ಜೂ.29 ರಿಂದ ಮನೆ ಮನೆಗೆ ಭೇಟಿ ನೀಡಿ ಮತದಾರರಿಗೆ ಗಣತಿ ನಮೂನೆಗಳನ್ನು ವಿತರಿಸುವ ಕಾರ್ಯ ಭರದಿಂದ ನಡೆದಿದ್ದು, ಜು.12ರವರೆಗೆ ಜಿಲ್ಲೆಯ ಪ್ರಗತಿ ವರದಿಯ ಪ್ರಕಾರ ಇಲ್ಲಿಯವರೆಗೆ 18,88,657 ಗಣತಿ ನಮೂನೆ ಮತದಾರರಿಗೆ ವಿತರಿಸಲಾಗಿದೆ. ಅವುಗಳಲ್ಲಿ 6,44,810 ಗಣಕೀಕರಣಗೊಂಡ ಗಣತಿ ನಮೂನೆಗಳಿವೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳಾದ ಜಿಲ್ಲಾಧಿಕಾರಿ ಡಾ. ಆನಂದ ಕೆ ಅವರು ತಿಳಿಸಿದ್ದಾರೆ.

ಮತದಾರರ ಪಟ್ಟಿಯಂತೆ ಜಿಲ್ಲೆಯಲ್ಲಿ ಒಟ್ಟು 19,82,114 ಮತದಾರರು ದಾಖಲಾಗಿದ್ದಾರೆ. ಇವರಿಗೆ ಮನೆ ಮನೆಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸಿ, ಅಗತ್ಯ ಮಾಹಿತಿಯನ್ನು ಸಂಗ್ರಹಿಸುವ ಕಾರ್ಯ ನಡೆಯುತ್ತಿದೆ ಎಂದವರು ತಿಳಿಸಿದ್ದಾರೆ.

ಗಣತಿನಮೂನೆಗಳ ವಿತರಣೆ ಮತ್ತು ಡಿಜಿಟಲೀಕರಣ ಕಾರ್ಯವು ಜೂನ್.30 ರಿಂದ ಜುಲೈ.29 ರವರೆಗೆ ನಡೆಯಲಿದ್ದು, ಈ ಅವಧಿಯಲ್ಲಿ ಮತದಾರರು ತಮ್ಮ ವಿವರಗಳನ್ನು ಪರಿಶೀಲಿಸಿ ಅಗತ್ಯ ದಾಖಲೆಗಳೊಂದಿಗೆ ನಮೂನೆಗಳನ್ನು ಸಲ್ಲಿಸಬಹುದಾಗಿದೆ.

1,674 ಮತದಾರರು ಆನ್ ಲೈನ್ ಮೂಲಕ ಗಣತಿ ನಮೂನೆಗಳನ್ನು ಸಲ್ಲಿಸಿದ್ದಾರೆ. 3509 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ. 4,738 ಮತದಾರರು ಮೃತಪಟ್ಟಿದ್ದಾರೆ. 1,364ಮತದಾರರು ಈಗಾಗಲೇ ನೋಂದಾಯಿಸಿಕೊಂಡಿರುವುದು ಪರಿಶೀಲನೆಯಲ್ಲಿ ಕಂಡುಬಂದಿದೆ.ಸಂಗ್ರಹಿಸಲಾಗದ ಅಥವಾ ಗೈರುಹಾಜರಾಗಿರುವ ಮತದಾರರು 82 ಹಾಗೂ 95 ಇತರೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾದಕ ದ್ರವ್ಯ ವ್ಯಸನಕ್ಕೆ ಬಲಿಯಾಗದಿರಿ :ಪಿಎಸ್ಐ ಹತ್ತಳ್ಳಿ

■ ಉದಯರಶ್ಮಿ ದಿನಪತ್ರಿಕೆ




ಕೊಲ್ಹಾರ: ನಾಳಿನ ನಾಡಿನ ನಕ್ಷತ್ರಗಳಾಗಿ ಬೆಳೆಯಬೇಕಾದ ವಿದ್ಯಾರ್ಥಿಗಳು, ಹೆತ್ತವರ ಕನಸುಗಳಿಗೆ ಕೊಳ್ಳಿ ಇಟ್ಟು ಮಾದಕ ದ್ರವ್ಯ ವ್ಯಸನಕ್ಕೆ ಬಲಿಯಾಗುತ್ತಿರುವುದು ಅತ್ಯಂತ ದುಃಖಕರ ಸಂಗತಿ ಎಂದು ಕೂಡಗಿ ಪೊಲೀಸ್ ಠಾಣೆಯ ಕ್ರೈಂ ಪಿಎಸ್‌ಐ ವಿ.ಎಚ್. ಹತ್ತಳ್ಳಿ ಹೇಳಿದರು.

ಅವರು ತೆಲಗಿ ಗ್ರಾಮದ ಶ್ರೀ ಸದ್ಗುರು ಸದಾನಂದ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಕೂಡಗಿ ಪೊಲೀಸ್ ಠಾಣೆಯ ವತಿಯಿಂದ ಶನಿವಾರ ಆಯೋಜಿಸಲಾದ ಎನ್‌ಟಿ ಡ್ರಗ್ಸ್ ಮಾದಕ ದ್ರವ್ಯ ದುರ್ಬಳಕೆ ಮತ್ತು ಅಕ್ರಮ ಸಾಗಾಣಿಕೆ ತಡೆ ಜಾಗೃತಿ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದರು.ವಿದ್ಯಾರ್ಥಿಗಳು ಇಂತಹ ದುಷ್ಚಟಗಳಿಂದ ದೂರವಿದ್ದು, ತಮ್ಮ ಭವಿಷ್ಯವನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು. ಮಾದಕ ದ್ರವ್ಯಗಳ ಅಕ್ರಮ ಸಾಗಾಣಿಕೆ ಅಥವಾ ದುರ್ಬಳಕೆ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿ, ಸಮಾಜವನ್ನು ವ್ಯಸನಮುಕ್ತಗೊಳಿಸಲು ಸಾರ್ವಜನಿಕರು ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಎಲ್.ಎಚ್. ಪತ್ತಾರ, ಪೊಲೀಸ್ ಸಿಬ್ಬಂದಿಗಳಾದ ಮಲ್ಲು ಆರ್. ಆಶಂಪೂರ, ಸುನೀಲ ತಿವಾರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅಮೂಲ್ಯ ಜೀವ ಉಳಿಸಲು ರಕ್ತದಾನ ಮಾಡಿ :ದಾವುದ ಕರೆ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಸಮಾಜದಲ್ಲಿ ಪ್ರತಿನಿತ್ಯವೂ ಪ್ರತಿಕ್ಷಣದಲ್ಲೂ ನಾನಾ ಕಾರಣಗಳಿಂದ ರಕ್ತ ಹೀನತೆ ಉಂಟಾದಾಗ ವ್ಯಕ್ತಿಗಳಿಗೆ ರಕ್ತ ನೀಡಿ ಬದುಕಿಸಲು ಅವಶ್ಯಕವಾಗಿ ರಕ್ತ ಬೇಕಾಗುತ್ತದೆ ಎಂದು ಸಿಂದಗಿ ವೇದಿಕೆ ಘಟಕದ ಅಧ್ಯಕ್ಷ ದಾವುದಸಾಬ ನದ್ವಿ ಕರೆ ನೀಡಿದರು.

ಸಿಂದಗಿ ನಗರದ ಅಖಿಲ ಭಾರತೀಯ ಮಾನವೀಯತೆ ಸಂದೇಶ ವೇದಿಕೆ ಹಾಗೂ ನ್ಯೂ ಇರಾ ಪ್ರಾಥಮಿಕ ಮತ್ತು ಪ್ರೌಢಶಾಲೆ ಸಿಂದಗಿ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಎಲ್ಲ ದಾನಗಳಿಗಿಂತ ಸಮಾಜದಲ್ಲಿ ರಕ್ತದಾನ ಮಹಾ ಶ್ರೇಷ್ಠದಾನವಾಗಿದೆ. ಅಮೂಲ್ಯ ಜೀವ ಉಳಿಸಲು ಆರೋಗ್ಯವಂತ ಯುವಕರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡುವ ಮೂಲಕ ರಕ್ತದ ಅವಶ್ಯಕತೆಯಿಂದ ಬಳಲುವ ಅಮೂಲ್ಯ ಜೀವ ಉಳಿಸಲು ಮುಂದಾಗಬೇಕು ಎಂದರು. ಈ ವೇಳೆ ಸಿಂದಗಿಯ ತಾಲೂಕಾಸ್ಪತ್ರೆ ರಕ್ತ ನಿಧಿ ವಿಭಾಗದ ತಾಂತ್ರಿಕ ಅಧಿಕಾರಿ ರಾಜಶೇಖರ ನರಗೋದಿ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದ ರಕ್ತವು ಜೀವ ದ್ರವ್ಯವಾಗಿ ಪ್ರಾಣ ಉಳಿಸುತ್ತದೆ. ರಕ್ತದಾನದಿಂದ ಆರೋಗ್ಯ ಸುಧಾರಿಸುತ್ತದೆ. ದೇಹದಲ್ಲಿ ಅತ್ಯಂತ ಕಡಿಮೆ ಅವಧಿಯಲ್ಲಿ ಹೊಸ ರಕ್ತ ಉತ್ಪತ್ತಿಯಾಗುತ್ತದೆ. ಹೀಗಾಗಿ ಭಯಪಡುವ ಅಗತ್ಯವಿಲ್ಲ ಎಂದರು.

ಇದೇ ಸಂದರ್ಭದಲ್ಲಿ 50ಕ್ಕೂ ಅಧಿಕ ಯುವಕರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿದರು. ಶಿಬಿರದಲ್ಲಿ ಜಿಲ್ಲಾಸ್ಪತ್ರೆಯ ರಕ್ತ ಶೇಖರಣಾ ಘಟಕದ ವೈದ್ಯ ಡಾ.ಗೌರವ ಮಾನೆ, ಡಾ.ಖದೀಜಾ ಮೈತ್ರಿ ಮಾತನಾಡಿದರು. ಅಂಜುಮನ್ ಇಸ್ಲಾಂ ಕಮಿಟಿ ಅಧ್ಯಕ್ಷ ಅಬ್ದುಲ್‌ರಜಾಕ ದುದನಿ, ಸಿಂದಗಿಯ ನ್ಯೂ ಇರಾ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಅಧ್ಯಕ್ಷ ಮೈಬುಬಸಾಬ ಹಸರಗುಂಡಗಿ, ವೇದಿಕೆಯ ಪದಾಧಿಕಾರಿಗಳಾದ ಫಯಾಜ ನದ್ದಿ, ಖಾರಿ ರಿಯಾಜ ನದ್ವಿ, ಅಬ್ದುಲ್‌ರಹಮಾನ ನದ್ವಿ ಸೇರಿದಂತೆ ಅನೇಕರು ಇದ್ದರು. ಕಲೀಮುಲ್ಲಾ ನದ್ವಿ, ದಸ್ತಗೀರ ಉಸ್ತಾದ ಕಾರ್ಯಕ್ರಮ ನಿರ್ವಹಿಸಿದರು.



### ಹಿರಿಯ ಸಹಕಾರಿ ಧುರೀಣ, ಪರಿಸರ ತಜ್ಞ ಡಾ.ಎಂ.ಆರ್.ದೇಸಾಯಿ ಯಡಹಳ್ಳಿ ವಿಷಾದ

# ದೇಶ-ಸಮಾಜ ಕುರಿತ ಚಿಂತನೆಗಳು ಕಡಿಮೆಯಾಗುತ್ತಿರುವುದು ಕಳವಳಕಾರಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: "ನಾನು, ನನ್ನದು ಎಂಬುದಕಷ್ಟೇ ಸೀಮಿತವಾಗಿ ದೇಶ, ಸಮಾಜ ಕುರಿತ ಚಿಂತನೆಗಳು ಇತ್ತೀಚಿನ ದಶಕಗಳಲ್ಲಿ ಕಡಿಮೆಯಾಗಿರುವುದು ಕಳವಳ ತಂದಿದೆ" ಎಂದು ಹಿರಿಯ ಸಹಕಾರಿ ಧುರೀಣ, ಪರಿಸರ ತಜ್ಞ ಡಾ.ಎಂ.ಆರ್.ದೇಸಾಯಿ ಯಡಹಳ್ಳಿ ಹೇಳಿದರು.

ಬಾಗಲಕೋಟ ಜಿಲ್ಲೆ ಬೀಳಗಿ ಹತ್ತಿರದ ಯಡಹಳ್ಳಿ ಗ್ರಾಮದಲ್ಲಿ ನಡೆದ ಅನಗತ್ಯ, ಆಡಂಬರದ ಆಚರಣೆಗಳ ಕುರಿತು ನಡೆದ ಚಿಂತನ ಸಭಾ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, "ನೆಹರು ಪ್ರಧಾನಿಯಾಗಿದ್ದಾಗ 1962ರ ಇಂಡೋ-ಚೈನಾ ವಾರ್ ನಲ್ಲಿ ಅನಗತ್ಯವಾಗಿ ದೀಪಗಳನ್ನು ರಾತ್ರಿ ಹಚ್ಚಬಾರದು ಎಂಬ ಕರೆಗೆ, ಶಾಸ್ತ್ರೀಯವರು ಪ್ರಧಾನಿಯಾಗಿದ್ದಾಗ ಆಹಾರ ಕೊರತೆ ನೀಗಿಸಲು ಸೋಮವಾರ ಉಪವಾಸ ಮಾಡಬೇಕು ಎಂಬ ಕರೆಗೆ ದೇಶದ ಜನತೆಯಿಂದ ದೊರೆತ ಸ್ಪಂದನೆ ಅಪೂರ್ವವಾಗಿತ್ತು. ದೇಶದ ಬಹುಸಂಖ್ಯೆ ಇದನ್ನು ಪಾಲನೆ ಮಾಡಿದ್ದರು. ಆದರೆ, ಅಮೇರಿಕಾ-ಇರಾಕ ಯುದ್ದದ ಸಂದರ್ಭದಲ್ಲಿ ಇತ್ತೀಚೆಗೆ ಪ್ರಧಾನಿ ಮೋದಿ ದೇಶದಲ್ಲಿ ಯುದ್ಧದ ಕಾರಣದಿಂದ ಆಮದು ಮಾಡಿಕೊಳ್ಳುವ ತೈಲ ಸಕಾಲಕ್ಕೆ ದೊರೆಯದೆ ಸಂಕಷ್ಟ ಉಂಟಾಗಬಹುದು. ಇಂಧನ ಮಿತವಾಗಿ ಬಳಸಿ, ಅನಗತ್ಯ ಸಂಚಾರ ಬೇಡ ಎಂದು ಮಹತ್ವದ ಸಲಹೆ ನೀಡಿದ್ದರು. ಆದರೆ ದೇಶದ ಜನ ಇದನ್ನು ಪಾಲಿಸಲಿಲ್ಲ. ಇದು ದೇಶ, ಸಮಾಜ ಕುರಿತು ನಮ್ಮ ಬದ್ಧತೆ ಕ್ಷೀಣಗೊಂಡಿರುವ ಸಂಕೇತ" ಎಂದರು.

ನೈಸರ್ಗಿಕ ಸಂಪತ್ತನ್ನು ನಾವು ಅನಗತ್ಯ ಹಾಳು ಮಾಡುತ್ತಿದ್ದೇವೆ. ಅರಣ್ಯ ಸಂಪತ್ತು ರಕ್ಷಿಸುವ ಉನ್ನತ ಅರಣ್ಯ ಅಧಿಕಾರಿ ತಮ್ಮ ಮನೆಯಲ್ಲಿನ ಮದುವೆ ಆಮಂತ್ರಣ ನನಗೆ ನೀಡಿದ್ದರು. ಅದರ ತೂಕ 300 ಗ್ರಾಂ ಆಗಿತ್ತು. ಒಂದು ಕೆಜಿ ಕಾಗದ ತಯಾರಿಸಬೇಕಾದರೆ ಐದು ಕೆಜಿ ಕಟ್ಟಿಗೆ ಬೇಕಾಗುತ್ತದೆ. ಹೀಗೆ ಸಾವಿರ ಸಾವಿರ ಆಮಂತ್ರಣ ಪತ್ರಿಕೆಗಳನ್ನು ಮುದ್ರಿಸುತ್ತಾರೆ. ಇದಕ್ಕಾಗಿ ಎಷ್ಟು ಮರಗಳನ್ನು ನಾವು ಆಹುತಿ ಕೊಡುತ್ತೇವೆ? ಇದರ ಬದಲಾಗಿ ಫೋನ್ ಕರೆಯ ಮೂಲಕ ಅಥವಾ ವ್ಯಾಟ್ಸಪ್ ಸಂದೇಶದ ಮೂಲಕ ಆಮಂತ್ರಿಸಿದರೆ ಅವರ ಸಮಯ, ಶ್ರಮ ಮತ್ತು ದೇಶದ ಅಮೂಲ್ಯ ಸಂಪತ್ತು ಮಿಗಿಲಾಗಿ ಅವರು ಗಳಿಸಿದ ದೊಡ್ಡ ಮೊತ್ತದ ಧನವನ್ನು ಉಳಿಸಬಹುದು. ಇಂತಹ ಆಲೋಚನೆಗಳಿಗೆ ನಾವು ಒತ್ತು ಕೊಡುತ್ತಿಲ್ಲ. ಬದಲಾಗಿ ಬೇರೆಯವರ ಆಚರಣೆಗಳನ್ನು ನಾವು ಅನುಸರಿಸುತ್ತ ನಮ್ಮ ಮೂಲ ಸಂಸ್ಕೃತಿಯನ್ನು ಮರೆಯುತ್ತ ಅನಗತ್ಯ ಆಡಂಬರಕ್ಕೆ ಬಿದ್ದು, ಇಡೀ ಸಮಾಜ ಕನಿಷ್ಠ ಸ್ಥಿತಿಗೆ ತಲುಪುತ್ತಿದೆ. ಈ ಸಂದರ್ಭದಲ್ಲಿ ನಾವು ಕೈಚೆಲ್ಲಿ ಕೂಡದೇ ಬದಲಾವಣೆ ನನ್ನಿಂದ ಸಾಧ್ಯ ಎಂದು ಎಲ್ಲರೂ ಆಲೋಚಿಸಿದರೆ ತಕ್ಕ ಮಟ್ಟಿಗೆ ಸುಧಾರಣೆ ತರಬಹುದು ಎಂದರು.



ಪ್ರಾಸ್ತಾವಿಕವಾಗಿ ಮಾತನಾಡಿದ ಡಾ.ಮಹಾಂತೇಶ ಬಿರಾದಾರ, ಇತ್ತೀಚಿನ ದಿನಗಳಲ್ಲಿ ಮದುವೆ, ರಿಸಪ್ಶನ್, ಎಂಗೇಜಮೆಂಟ್, ಯಾದಿ ಹೆಸರುಗಳಲ್ಲಿ ಮತ್ತು ಸೀಮಂತ ಕಾರ್ಯ, ಜನ್ಮದಿನ, ಹುಟ್ಟುಗಿರಣಿ, ಮದುವೆ ವಾರ್ಷಿಕೋತ್ಸವ ಇತ್ಯಾದಿಗಳನ್ನು ಅನಗತ್ಯ ಆಡಂಬರದ ಆಚರಣೆಗಳಿಂದ ಸಾಲ ಮಾಡಿಯಾದರೂ ಇವುಗಳನ್ನು ಮಾಡಲೇಬೇಕೆಂಬ ಮನಸ್ಥಿತಿಗಳಿಂದಾಗಿ ಇದೊಂದು ಸಮಾಜಿಕ ಪಿಡುಗಾಗಿ ಪರಿಣಮಿಸಿದ್ದು, ಈ ಕುರಿತು ಎಲ್ಲರೂ ಚಿಂತನ-ಮಂಥನ ನಡೆಸಬೇಕು ಎಂದರು.

ಸಹಕಾರಿ ಧುರೀಣ ಎಂ.ಆರ್. ಪಾಟೀಲ, ಬಳ್ಳೊಳ್ಳಿ, ದಯಾನಂದ ಪಾಟೀಲ ಮುಧೋಳ, ಎಸ್.ಟಿ.ಪಾಟೀಲ ಯಡಹಳ್ಳಿ ಮಾತನಾಡಿ, ರಾಜ್ಯ ಬಾರ್ ಕೌನ್ಸಿಲ್ ಮಾಜಿ ಅಧ್ಯಕ್ಷ ಶಂಕರಗೌಡ ಪಾಟೀಲ, ನ್ಯಾಯವಾದಿಗಳಾದ ಶ್ರೀಕಾಂತ ಶಿರಾಡೋಣ, ಎನ್.ಎಸ್.ಲೋಣಿ, ಶರಶ್ಚಂದ್ರ ಪಾಟೀಲ, ಲೋಕಾಯುಕ್ತ ಡಿಎಸ್ಪಿ ಬಸವರಾಜ ಯಲಿಗಾರ, ಸುರೇಶ ದೇಸಾಯಿ ಕಲಕೇರಿ, ಅದೃಶ್ಯಪ್ಪ ದೇಸಾಯಿ, ಪ್ರಕಾಶ ಪರನಾಕರ ಮತ್ತಿತರರು ಮಾತನಾಡಿ, ದುಂದು ವೆಚ್ಚ, ಅನಗತ್ಯ ಆಚರಣೆ, ವಿವಾಹ ವಿಚ್ಛೇದನಗಳು, ವೃದ್ಧಾಪ್ಯದಲ್ಲಿನ ಪಾಲಕರ ನಿರ್ಲಕ್ಷ್ಯ ಮತ್ತಿತರ ವಿಷಯಗಳ ಕುರಿತು ತಿಳಿಸಿಕೊಟ್ಟರು.ಬೀಳಗಿ ತಾಲೂಕು ಕೊಲೂರ ಗ್ರಾಮದ ಶಿವಪ್ಪ ಸಂಗಪ್ಪ ತಿಪರೆಡ್ಡಿ, ತಿಕೋಟಾ ತಾಲೂಕಿನ ಬರಟಗಿಯ ಗುರುಪಾದಗೌಡ ದಾಶ್ಯಾಳ ಮಾತನಾಡಿ, ಇನ್ನು ಮುಂದೆ ನಮ್ಮ ಮನೆಯಲ್ಲಿ ನಡೆಯುವ ಕಾರ್ಯಕ್ರಮಗಳನ್ನು ಸರಳವಾಗಿ ಮಾಡುವುದಾಗಿ ಸಭೆಗೆ ತಿಳಿಸಿದರು.

ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಡಾ. ಗಂಗಾಧರ ಸಂಬಣ್ಣಿ, ಅಹಿಂದ ಮುಖಂಡ ಸೋಮನಾಥ ಕಳ್ಳಿಮನಿ, ದೇವಕಾಂತ ಬಿಜ್ಜರಗಿ, ಶರಣು ಸಬರದ, ಎಚ್.ಎಸ್.ಕೋರಡ್ಡಿ, ಮಲ್ಲಪ್ಪ ಕಾಳಗಿ, ಹೊಸೂರು ಗ್ರಾಮದ ಮಲ್ಲಿಕಾರ್ಜುನ ಬಾರಡ್ಡಿ ಸೇರಿದಂತೆ ಈ ಚಿಂತನ ಸಭೆಯಲ್ಲಿ ಭಾಗವಹಿಸಿದ್ದ ವಿಜಯಪುರ ಮತ್ತು ಬಾಗಲಕೋಟ ಜಿಲ್ಲೆಯ ವಿವಿಧ ಸಮುದಾಯಗಳ ಪ್ರಮುಖರು ನಮ್ಮ-ನಮ್ಮ ಸಮುದಾಯಗಳಲ್ಲಿ, ಪ್ರದೇಶಗಳಲ್ಲಿ ಮತ್ತು ಆಪ್ತಮಿತ್ರರಲ್ಲಿ ನಾವೇ ಮುಂದಾಗಿ ಸರಳ ಕಾರ್ಯಕ್ರಮಗಳ ಕುರಿತು ಜನರಲ್ಲಿ ತಿಳಿಹೇಳುವುದಾಗಿ ಈ ಸಭೆ ನಿರ್ಣಯಿಸಿತು.

# 13 ದಿನಗಳಲ್ಲಿ ಎಸ್ಐಆರ್ ಕಾರ್ಯ ಪೂರ್ಣಗೊಳಿಸಿದ ಶಿಕ್ಷಕ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಬಸವನ ಬಾಗೇವಾಡಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ಕೊಲ್ಹಾರ ತಾಲೂಕಿನ ಬಾಗಾನಗರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರಾದ ಬಸವಲಿಂಗ ಕುಂಬಾರ ಅವರು ಎಸ್ಐಆರ್ ಕಾರ್ಯವನ್ನು ಕೇವಲ 13 ದಿನಗಳಲ್ಲಿ ಯಶಸ್ವಿಯಾಗಿ ಪೂರ್ಣಗೊಳಿಸಿ ಗಮನ ಸೆಳೆದಿದ್ದಾರೆ.

ತಾಲೂಕಿನ ಮತಗಟ್ಟೆ ಸಂಖ್ಯೆ 190ರಲ್ಲಿ ಒಟ್ಟು 489 ಮತದಾರರ ಮಾಹಿತಿಯನ್ನು ಸಮಗ್ರವಾಗಿ ಪರಿಷ್ಕರಿಸುವ ಜವಾಬ್ದಾರಿಯನ್ನು ಹೊತ್ತಿದ್ದ ಅವರು, ಕಡಿಮೆ ಅವಧಿಯಲ್ಲಿ ನಿಖರವಾಗಿ ಕಾರ್ಯ ಪೂರ್ಣಗೊಳಿಸಿರುವುದು ವಿಶೇಷವಾಗಿದೆ.

ಈ ಸಾಧನೆಯನ್ನು ಗುರುತಿಸಿ ತಹಶೀಲ್ದಾರ ಎಸ್.ಎಸ್. ಮ್ಯಾಗೇರಿ ಅವರು ತಮ್ಮ ಕಚೇರಿಗೆ ಕರೆಯಿಸಿಕೊಂಡು ಬಸವಲಿಂಗ ಕುಂಬಾರರನ್ನು ಸನ್ಮಾನಿಸಿ ಅಭಿನಂದಿಸಿದರು. ಅವರ ಕಾರ್ಯಕ್ಕೆ ಜಿಲ್ಲಾ ಆಡಳಿತವೂ ಮೆಚ್ಚುಗೆ ವ್ಯಕ್ತಪಡಿಸಿದೆ.

ಈ ಸಂದರ್ಭದಲ್ಲಿ ಉಪತಹಶೀಲ್ದಾರ ಕೆ.ಎಂ. ನಧಾಪ್, ಪಿ.ಎಸ್. ಹುಡೇದ, ಭಾಗ್ಯಶ್ರೀ ಪಾಟೀಲ, ಶ್ರೀಶೈಲ ವಾಲಿಕಾರ, ಮಂಜುನಾಥ ಕಲ್ಲೂರ, ಬಿ.ಎಸ್. ಮಮದಾಪೂರ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ವಿಜಯಪುರ ನಗರ ಶಾಸಕ ಯತ್ನಾಳರಿಗಷ್ಟೇ ಸೀಮಿತವಲ್ಲ

## ಹಿಂದೂ ಬಾಂಧವರು ನನ್ನವರೇ, ಅವರ ಮತದಾನ ಹಕ್ಕು ಉಳಿಸಲು ನಾನು ಶ್ರಮಿಸುವೆ | ಕೆಪಿಸಿಸಿ ಸದಸ್ಯ ಅಬ್ದುಲ್ ಹಮೀದ್ ಮುಶ್ರೀಫ್ ಹೇಳಿಕೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಹಿಂದೂ ಬಾಂಧವರು ನನ್ನ ಸಹೋದರರು, ಅವರು ಸಾವಿರಾರು ಸಂಖ್ಯೆಯಲ್ಲಿ ಮತಗಳನ್ನು ನೀಡಿದ್ದಾರೆ, ಅವರ ಮತದಾನ ಹಕ್ಕು ರಕ್ಷಣೆ ನನ್ನ ಹೊಣೆಯೂ ಕೂಡಾ ಹೌದು, ಹಿಂದೂ ಬಾಂಧವರು ಸಹ ನನ್ನನ್ನು ಪ್ರೀತಿಸುತ್ತಾರೆ, ವಿನಕಾರಣ ಹುಳಿ ಹಿಂಡುವ ಕೆಲಸ ಮಾಡಬೇಡಿ, ವಿಜಯಪುರ ನಗರ ನಿಮಗಷ್ಟೇ ಸೇರಿದ್ದಲ್ಲ ಎಂದು ಕೆಪಿಸಿಸಿ ಸದಸ್ಯ ಅಬ್ದುಲ್ ಹಮೀದ್ ಮುಶ್ರೀಫ್ ಹೇಳಿದ್ದಾರೆ.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಎಸ್.ಐ.ಆರ್. ಪ್ರಕ್ರಿಯೆಯಲ್ಲಿ ಭಾಗಿಯಾಗಲು ನಾನು ಯಾರು ಎಂದು ಕೇಳಿರುವ ನಗರ ಶಾಸಕ ಯತ್ನಾಳರಿಗೆ ತಿರುಗೇಟು ನೀಡಿರುವ ಮುಶ್ರೀಫ್ ಅವರು, ನಾನು ಎರಡು ಬಾರಿ ನಗರ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಿದ್ದೇನೆ, ಕಳೆದ ಬಾರಿ

86 ಸಾವಿರ ಮತಗಳನ್ನು ಪಡೆದಿರುವೆ, 25 ಸಾವಿರಕ್ಕೂ ಹೆಚ್ಚು ಹಿಂದೂ ಬಾಂಧವರು ನನಗೆ ಮತದಾನ ನೀಡಿದ್ದಾರೆ, ನಾನು ಬಿ.ಎಲ್.ಎ–1 ಇರುವೆ, ಈ ಎಲ್ಲ ಕಾರಣಕ್ಕೆ ನಾನು ನ್ಯಾಯಕ್ಕೆ ಹೋರಾಡುತ್ತಿರುವೆ, ಯಾರ ಹೆಸರು ಮತಪಟ್ಟಿಯಿಂದ ಕೈ ತಪ್ಪಿ ಹೋಗಬಾರದು ಎಂದು ಶ್ರಮಿಸುತ್ತಿರುವೆ, ಹೀಗಾಗಿ ಶಾಸಕರು ವಿಜಯಪುರ ನಗರ ತಮಗಷ್ಟೇ ಸೀಮಿತ ಎನ್ನುವುದರಿಂದ ಹೊರಬರಬೇಕು ಎಂದರು.

ಗೂಂಡಾಗಿರಿ ಮಾಡುತ್ತೇನೆ ಎಂದು ಯತ್ನಾಳ ಹೇಳಿದ್ದಾರೆ. ಆದರೆ, ವಿಜಯಪುರ ನಿಮಗೆ ಮಾತ್ರ ಸೇರಿಲ್ಲ. ಇಡೀ ನಗರದ ಜನತೆಯ ಪರವಾಗಿ ನಾನು ಮಾತನಾಡುತ್ತೇನೆ. ನಾನು ಎಲ್ಲಿಯು ಗೂಂಡಾಗಿರಿ, ದಬ್ಬಾಳಿಕೆ ಮಾಡಿಲ್ಲ, ಮುಸ್ಲಿಮರು ಮಾತ್ರವಲ್ಲದೆ ಹಿಂದೂಗಳು ಸಹ ನನ್ನನ್ನು ಪ್ರೀತಿ ಮಾಡುತ್ತಾರೆ. ಅವರು ನನ್ನ ಸಹೋದರರು, ಹಿಂದೂ ಬಾಂಧವರ ಬಗ್ಗೆ ನಿಮ್ಮಂತೆ ನಕಲಿ ಪ್ರೀತಿ ನಾನು ಮಾಡುವುದಿಲ್ಲ ತಿಳಿದುಕೊಳ್ಳಿ ಎಂದರು.

ನಾನು ಇಡೀ ನಗರವನ್ನು ಸುತ್ತಾಡುತ್ತೇನೆ. ನೀವು ಸುತ್ತಾಡಿ, ನಿಮಗೆ ಯಾರು ಬೇಡ ಎಂದಿದ್ದಾರೆ, ನಗರದ ವಾರ್ಡ್ ಗಳಲ್ಲಿ ಒಂದೇ ಜಾತಿ, ಸಮುದಾಯಕ್ಕೆ ಸೇರಿದ ಜನರು ಮಾತ್ರ ಇಲ್ಲ. ಎಲ್ಲ ಸಮಾಜ ಬಾಂಧವರು ನನ್ನ ಕಷ್ಟ, ಸುಖಕ್ಕೆ ಆಗಿದ್ದಾರೆ. ಅವರ ಕಷ್ಟ, ಸುಖಕ್ಕೆ ನಾನು ಆಗುವೆ, ನಾನು ಯಾರ ಹೆದರಿಕೆಗೂ ಜಗ್ಗಲ್ಲ ಎಂದರು.

### ಪ್ರಮಾಣ ಮಾಡಲು ಶಾಸಕರಿಗೆ ಸವಾಲು

**ನಾಗಠಾಣ ಸೇರಿ ಬೇರೆ ಮತಕ್ಷೇತ್ರದ ಜನರನ್ನು ನಗರ ಮತಕ್ಷೇತ್ರಕ್ಕೆ ಸೇರಿಸುತ್ತಿದ್ದೀರಿ ಯಾಕೆ?, ನಗರ ಮತಕ್ಷೇತ್ರದ ಹಿಂದೂಗಳ ಮೇಲೆ ನಮಗೆ ನಂಬಿಕೆ ಇಲ್ಲವೇ?, ನೀವು ಗೆದ್ದಿರುವುದು ಬೋಗಸ್ ಮತಗಳಿಂದ. ಒಂದು ವೇಳೆ, ಬೋಗಸ್ ಮತಗಳಿಂದ ಗೆದ್ದಿಲ್ಲ ಎನ್ನುವುದಾದರೆ ಎಂದು ನೀವು ನಿಮ್ಮ ಮಕ್ಕಳ ಪ್ರಮಾಣ ಮಾಡಿ ನೋಡೋಣ ಎಂದು ಮುಶ್ರೀಫ್ ಸವಾಲು ಹಾಕಿದರು. ನಾನು ಯಾವ ಅಕ್ರಮವನ್ನೂ ಮಾಡಿಲ್ಲ, ಬೇಕಾದರೆ ನಾನೂ ನನ್ನ ಮಕ್ಕಳ ಮೇಲೆ ಪ್ರಮಾಣ ಮಾಡಲು ಸಿದ್ಧ ಎಂದರು.**

ಕೇವಲ ಅಲ್ಪಸಂಖ್ಯಾತರನ್ನು ಯಾಕೆ ಗುರಿ ಮಾಡುತ್ತೀರಿ?, ಅವರನ್ನು ಯಾಕೆ ನನ್ನನ್ನು ಬೈಯುತ್ತೀರಿ. ನೀವು ಬೈಯುವುದಾದರೆ ನನ್ನನ್ನು ಬೈಯಿರಿ. ಇಡೀ ಸಮುದಾಯವನ್ನು ಯಾಕೆ ಬೈಯುತ್ತೀರಿ ಎಂದು ಮುಶ್ರೀಫ್ ಖಾರವಾಗಿ ಪ್ರಶ್ನೆ ಮಾಡಿದರು.

ಮುಖಂಡರಾದ ಫಯಾಜ್ ಕಲಾದಗಿ, ಮಹಾದೇವ ರಾವಜೀ, ಅಪ್ಪು ಪೂಜಾರಿ, ಈರಪ್ಪ ಕುಂಬಾರ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಜು.15 ರಂದು ತರಬೇತಿ– ಇ–ಹರಾಜು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅಬಕಾರಿ ಇಲಾಖೆಯಲ್ಲಿ ಸ್ಥಗಿತಗೊಂಡಿರುವ ಹಾಗೂ ಮಂಜೂರಾಗದೇ ಬಾಕಿ ಇರುವ ನೋಂದಾಯಿತ ಬಿಡ್ಡದಾರರಿಗೆ ಜು. 15ರಂದು ವಿಜಯಪುರದ ಜಿಲ್ಲಾ ಪಂಚಾಯಿತಿ ಸಭಾ ಭವನದಲ್ಲಿ ತರಬೇತಿ ಹಾಗೂ ಇ–ಹರಾಜು ಆಯೋಜಿಸಲಾಗಿದೆ. ಪೋರ್ಟಲ್: https://www.mstcecommerce.com. ವಿಳಾಸದಲ್ಲಿ ಇ–ಹರಾಜಿಗೆ ನೋಂದಣಿ ಕಾರ್ಯ ಜು. 3 ರಿಂದ ಆರಂಭಗೊಂಡಿದೆ.

ಈ ಸಂಬಂಧ ಅಧಿಸೂಚನೆಯಲ್ಲಿ ಸೂಚಿಸಿದ ಎಲ್ಲಾ ರೀತಿಯ ಶುಲ್ಕಗಳು ಹಾಗೂ ಷರತ್ತುಗಳಿಗೆ ಒಳಪಟ್ಟು ಇಚ್ಛೆವುಳ್ಳ ವ್ಯಕ್ತಿ /ಸಂಸ್ಥೆ / ಕಂಪನಿ ಇತ್ಯಾದಿಯವರು ಭಾಗವಹಿಸಬಹುದಾಗಿದೆ ಎಂದು ಅಬಕಾರಿ ಉಪ ಆಯುಕ್ತರು ತಿಳಿಸಿದ್ದಾರೆ. ಜಿಲ್ಲೆಗೆ ಸಂಬಂಧಿಸಿದಂತೆ ಭಾರತ ಸರ್ಕಾರದ ಸ್ವಾಮ್ಯದ ಸಂಸ್ಥೆಯಾದ ಎಂಎಸ್‌ಟಿಸಿ ಲಿಮಿಟೆಡ್ ಇ–ಹೋಟೆಲ್‌ನಲ್ಲಿ ಇಂಡಿ VJP39/LND228/CLA2A/001, ಬಸವನಬಾಗೇವಾಡಿಗಿ–JP39/BAS226/CL2A/001–ಜಿಇಎನ್, ಮುದ್ದೇಬಿಹಾಳÀ VJP39/MUD229/CL2A/001, ಸಿಂದಗಿ VJP39/SIN230/CL2A/00, ಬಸವನಬಾಗೇವಾಡಿ VJP39/BAS226/CL2A/002, ಮುದ್ದೇಬಿಹಾಳ VJP39/MUD229/CL2A/002, ಸಿಂದಗಿ VJP39/SIN230/C2A002 ಈ ಸಿಎಲ್–2(ಎ) ಸನ್ನದುಗಳ GEN ಮೀಸಲಾತಿಗಳಾಗಿದ್ದು. ಇವುಗಳ ಬೇಸಿಕ್ ಪ್ರೈಸ್ ಇಂಡಿ 90 ಲಕ್ಷ, ಇಎಂಡಿ–180000, ಉಳಿದ ಕ್ರ. ಸಂ:2 ರಿಂದ 7 ವರೆಗಿನ ಪ್ರತಿಯೊಂದು ಸನ್ನದುಗಳಿಗೆ ಬೇಸ್ ಪ್ರೈಸ್ ಇಂಡಿ 80 ಲಕ್ಷ, ಇಎಂಡಿ 160000 ನಿಗದಿಪಡಿಸಿರುತ್ತಾರೆ. ಅದರಂತೆ ಸಿಎಲ್–9(ಎ) ಸನ್ನದುಗಳಾದ ವಿಜಯಪುರ VJP39/VIJ7/CL9A/001 2) VJP39/VIJ7/CL.9A/002 GEN ಬೇಸಿಕ್ ಪ್ರೈಸ್ I ಕೋಟಿ, EMD-200000 ನಿಗದಿ ಪಡಿಸಿರುತ್ತಾರೆ. ಇವುಗಳ ಹರಾಜು ಪ್ರಕ್ರಿಯೆ ವೇಳಾಪಟ್ಟಿಯನ್ವಯ ಹರಾಜು ಪ್ರಕ್ರಿಯೆ ಕೈಗೊಳ್ಳಲು ಸರ್ಕಾರ ಆದೇಶ ಹೊರಡಿಸಿದೆ ಎಂದು ಅಬಕಾರಿ ಇಲಾಖೆ ಪ್ರಕಟಣೆ ತಿಳಿಸಿದೆ.

# ಹೊಣೆಗಾರಿಕೆ ಪಾಠ ಕಲಿಸಲು ಶಾಲಾ ಸಂಸತ್ತು ಸಹಕಾರಿ : ಡಿವೈಎಸ್ಪಿ ನಾಗರಾಜ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ನಗರದ ಬಿ. ಎಲ್. ಡಿ. ಇ ಸಂಸ್ಥೆಯ ಶ್ರೀ ಬಿ. ಎಂ. ಪಾಟೀಲ್ ಪಬ್ಲಿಕ್ ಸಿ.ಬಿ.ಎಸ್.ಇ ಶಾಲೆಯಲ್ಲಿ ವಿದ್ಯಾರ್ಥಿ ಚುನಾವಣೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರಮಾಣ ವಚನ ಸ್ವೀಕಾರ ಸಮಾರಂಭ ಶನಿವಾರ ನಡೆಯಿತು.

ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡ ವಿಜಯಪುರ ನಗರ ಡಿವೈಎಸ್ಪಿ ನಾಗರಾಜ ಜಿ. ಮಾತನಾಡಿ, ಶಾಲಾ ಸಂಸತ್ತು ಒಂದು ಹೊಣೆಗಾರಿಕೆಯ ಪಾಠವನ್ನು ಕಲಿಸುವ ಮಹತ್ವದ ಹೆಜ್ಜೆಯಾಗಿದೆ. ಶಾಲೆಯನ್ನು ಮುನ್ನಡೆಸಿಕೊಂಡು ಹೋಗುವ ಶಾಲಾ ಮುಖ್ಯ ಬಾಲಕ ಮತ್ತು ಬಾಲಕಿಯರು ಭವಿಷ್ಯದಲ್ಲಿ ದೇಶವನ್ನು ಮುನ್ನಡೆಸುವ ವ್ಯಕ್ತಿಗಳಾಗಬಹುದು ಎಂದು ಹೇಳಿದರು.

ವಿದ್ಯಾರ್ಥಿಗಳು ಶಿಕ್ಷಕರು ಮತ್ತು ಪಾಲಕರಿಗೂ ಗೌರವ ಕೊಡಬೇಕು. ಪ್ರತಿಜ್ಞಾ ವಿಧಿ ಸ್ವೀಕರಿಸಿರುವ ಪದಾಧಿಕಾ–ರಿಗಳು ಉತ್ತಮವಾಗಿ ಕಾರ್ಯ ನಿರ್ವಹಿಸಬೇಕು ಅವರು ಹೇಳಿದರು.

ಶಾಲಾ ಮುಖ್ಯ ಬಾಲಕಿಯಾಗಿ ಆಯ್ಕೆಯಾದ ಕಿಂಜಲ್ ಹಜೇರಿ, ಮುಖ್ಯ ಬಾಲಕನಾಗಿ ಆಯ್ಕೆಯಾದ ಅರ್ಜುನ ಪಾಟೀಲ, ಕ್ರೀಡಾ ಮುಖ್ಯ ವಿಭಾಗದ ಮುಖ್ಯ ಬಾಲಕ ಅಪ್ಪು ಬಬಲೇಶ್ವರ, ಮುಖ್ಯಬಾಲಕಿ ಭವಿ ರುಣವಾಲ, ಸಾಂಸ್ಕೃತಿಕ ವಿಭಾಗದ ಮುಖ್ಯ ಬಾಲಕ ಕುಮಾರ ತೇಜಸ ನಾಯಕ, ಬಾಲಕಿ ಸಾಮಿಯಾ ಜೈನ್, ಶಾಲಾ ಶಿಸ್ತು ಉಸ್ತುವಾರಿ ವಿಭಾಗದ ಮುಖ್ಯ ಬಾಲಕ ಸಮರ್ಥ ಮದ್ದಾನಿಮಠ, ಮುಖ್ಯ ಬಾಲಕಿ ಶ್ರೇಯಾ ವಂದಾಲ, ಶಾಲಾ ಆವರಣ ಉಸ್ತುವಾರಿ ಮುಖ್ಯ ಬಾಲಕನಾದ ಕುಮಾರ ಫೈರ್ಝುಲ್ ಬಲವನೆಕರ, ಮುಖ್ಯ ಬಾಲಕಿಯಾದ ಕುಮಾರಿ ನಿಧಿ ಢವಳಗಿ, ಮಾಧ್ಯಮ ಉಸ್ತುವಾರಿ ಮುಖ್ಯ ಬಾಲಕಿ ಅದ್ವಿಕಾ ಸಾಸನೂರ, ವೈಭವಿ ನಾರ್ವೇಕರ್, ಪ್ರಣವ ಶಹ, ವಿಶ್ವನಾಥ ನಾಗರಾಳ ತಮ್ಮ ತಂಡದೊಂದಿಗೆ ಬಂದು ಅಥಿತಿಗಳಿಂದ ಬ್ಯಾಡ್ಜ್ ಮತ್ತು ಶಾಲಾ ಧ್ವಜವನ್ನು ಸ್ವೀಕರಿಸಿದರು. ಅಥಿಗಳು ಮಕ್ಕಳಿಗೆ ಪ್ರಮಾಣವಚನ ಬೋಧಿಸಿದರು.

ಈ ಸಂದರ್ಭದಲ್ಲಿ ಶಾಲೆ ಪ್ರಾಚಾರ್ಯೆ ಶ್ರೀಮತಿ ವಸುಧಾ ನಾರ್ವೇಕರ, ಶಾಲಾ ಹಿರಿಯ ಕಾರ್ಯ ಸಂಂ–ಯೋಜಕಿ ದೀಪಾ ಜಂಬೂರೆ, ವಿದ್ಯಾರ್ಥಿಗಳು ಹಾಗೂ ಶಾಲೆ ಸಿಬ್ಬಂದಿ ಉಪಸ್ಥಿತರಿದ್ದರು.

# ಸಾರಸ್ವತ ಲೋಕಕ್ಕೆ ಪಾದಾರ್ಪಣೆ ಮಾಡಿದ ಪಟೇಲ್

■ ಉದಯರಶ್ಮಿ ದಿನಪತ್ರಿಕೆ



**ಹಾಜಿಗಳಿಗೆ ಹಾಗೂ ಲೇಖಕರಿಗೆ ಸನ್ಮಾನ**
**ಕೃತಿ ಬಿಡುಗಡೆ ಸಂದರ್ಭದಲ್ಲಿ ಹಜ್ ಯಾತ್ರೆಯನ್ನು ಯಶಸ್ವಿಯಾಗಿ ಪೂರೈಸಿ ತಾಯ್ನಾಡಿಗೆ ಹಿಂದಿರುಗಿದ ರಫೀಕ್ ವಡಿಕೇರಿ, ಅಬ್ದುಲ್ ರಜಾಕ್ ಹವಾಲ್ದಾರ್, ಗಾಲೀಬ್ ಖಾನ್ ಮೌಲಾನಾ ಹಾಗೂ ಮೈಮುದ ವಡಿಕೇರಿ ಇವರಿಗೆ ಹಾಗೂ ಕೃತಿಯ ಕರ್ತೃ ಇಲಿಯಾಸ್ ಪಟೇಲ್ ಬಳಗಾನೂರ ಅವರಿಗೆ ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಯಿತು.**

ಕೆಂಭಾವಿ: ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚುತ್ತಿರುವ ಅಶ್ಲೀಲ ಸಾಹಿತ್ಯ ಸಮಾಜ ಮತ್ತು ಸಂಸ್ಕೃತಿಗೆ ಮಾರಕವಾಗಿದೆ. ಹೀಗಾಗಿ ಸಮಾಜದಲ್ಲಿ ಸಾಮರಸ್ಯ ಸಾರುವ ಉತ್ತಮ ಸಾಹಿತ್ಯ ಮೂಡಿಬರಬೇಕಿದೆ ಎಂದು ಮಳಖೇಡದ ಅ. ಸೈ. ಶಾ. ಮುಸ್ತಫಾ ಖಾದ್ರಿ ಸಾಹೇಬ್ ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಶ್ರೀಗುರು ಕಾಂತೇಶ್ವರ ಜನಕಲ್ಯಾಣ ಸೇವಾ ಪ್ರತಿಷ್ಠಾನ ಹಾಗೂ ತೈಸಿನ್ – ತಸ್ಲೀಮ್ ಗ್ರಂಥಮಾಲೆ ಪ್ರಕಾಶನ ಇವರ ಸಂಂ–ಯುಕ್ತಾಶ್ರಯದಲ್ಲಿ ರವಿವಾರ ಹಮ್ಮಿಕೊಂಡಿದ್ದ ಲೇಖಕ ಇಲಿಯಾಸ್ ಪಟೇಲ್ ಬಳಗಾನೂರ ಅವರ 'ಅತಿಥಿ ಹೃದಯ' ಕೃತಿ ಲೋಕಾರ್ಪಣೆ ಹಾಗೂ ಕವಿಗೋಷ್ಠಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು ದಿನದಿಂದ ದಿನಕ್ಕೆ ಮಾನವೀಯ ಮೌಲ್ಯಗಳು ನಶಿಸಿ, ಯುವಕರಲ್ಲಿ ಸಂಸ್ಕಾರ ಕಣ್ಮರೆಯಾಗುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಯುವ ಸಾಹಿತಿಗಳು ಕನ್ನಡ ನಾಡು ನುಡಿಯ ಶ್ರೀಮಂತಿಕೆಯನ್ನು ಎತ್ತಿ ಹಿಡಿಯುವ ಮೂಲಕ ಶಿಷ್ಟಾ ಸಾಹಿತ್ಯ ರಚನೆಗೆ ಮುಂದಾಗಲಿ ಎಂದು ಆಶಿಸಿದರು.

ಕೃತಿಯನ್ನು ಲೋಕಾರ್ಪಣೆ ಮಾಡಿದ ಸಿಂದಗಿ ಅಂಜುಮನ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಎಸ್. ಎಂ. ಪಾಟೀಲ್ ಗಣಿಹಾರ್ ಮಾತನಾಡಿ, ಬರಹಗಾರರು, ಚಿಂತಕರು, ಯುವಕರು, ಸಮಾಜದಲ್ಲಿ ಸೌಹಾರ್ದತೆ ಕಾಪಾಡುವಲ್ಲಿ ಪ್ರಮುಖ ಪಾತ್ರ ನಿರ್ವಹಿಸಬೇಕಿದೆ ಎಂದವರು, ಅತಿಥಿ ಹೃದಯ ಕೃತಿಯ ಮೂಲಕ ಸಾರಸ್ವತ ಲೋಕಕ್ಕೆ ಪಾದಾರ್ಪಣೆ ಮಾಡಿದ ಲೇಖಕ ಇಲಿಯಾಸ್ ಪಟೇಲ್ ಅವರಿಂದ ಮುಂದಿನ ದಿನಗಳಲ್ಲಿ ಇನ್ನಷ್ಟು ಮೌಲ್ಯಯುತ ಕೃತಿಗಳು ಪ್ರಕಟವಾಗಲಿ ಎಂದು ಹಾರೈಸಿದರು.

ಹಿರೇಮಠದ ಪೀಠಾಧಿಪತಿ ಶ್ರೀ ಷ. ಬ್ರ. ಚನ್ನಬಸವ ಶಿವಾಚಾರ್ಯರು ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಹಿರಿಯ ಪತ್ರಕರ್ತ ಸಂಜೀವರಾವ್ ಕುಲಕರ್ಣಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಾಹಿತಿ ನಿಂಗನಗೌಡ ದೇಸಾಯಿ ಕೃತಿಯ ಪರಿಚಯ ಮಾಡಿಕೊಟ್ಟರು.

ಕಾರ್ಯಕ್ರಮದಲ್ಲಿ ವಿಠ್ಠಲ ಚವ್ಹಾಣ, ವೀರಣ್ಣ ಕಲಿಕೇರಿ, ದೇವಿಂದ್ರಪ್ಪ ಕರಡಕಲ್, ಬಸವರಾಜ ಕೂಡ್ಲಿಗಿ, ಹಳ್ಳೇರಾವ್ ಕುಲಕರ್ಣಿ, ರಾಚಪ್ಪ ಕುಂಬಾರ, ಪರಶುರಾಮ ಮಾಳಹಳ್ಳಿಕರ್, ವೀರೇಶ ಟಕ್ಕಳಕಿ ಹಾಗೂ ನಾಗರಾಜ ಅವರು ಕವನ ವಾಚಿಸಿದರು. ಪ್ರಮುಖರಾದ ಅಯ್ಯೂಬ್ ಪಟೇಲ್ ಬಳಗಾನೂರ, ಮಕ್ತುಮ್ ಪಟೇಲ್, ಚಂದ್ರಶೇಖರ ಸ್ವಾಮಿ ಹಿರೇಮಠ, ಬಂದೇನವಾಜ್ ನಾಶಿ, ಬಂದೇನವಜಾ ನಾಲ್ತವಾಡ್, ಗುರು ಕುಲ್ಕರ್ಣಿ, ಮಹಿಬೂಬ್ ವಡಕೇರಿ ಸೇರಿದಂತೆ ಇತರರು ಪಾಲ್ಗೊಂಡಿದ್ದರು. ಕಾರ್ಯಕ್ರಮಕ್ಕೂ ಮುನ್ನ ಅಗಲಿದ ಗಾನ ಕೋಗಿಲೆ ಎಸ್ ಜಾನಕಿ ರವರ ಆತ್ಮಕ್ಕೆ ಶಾಂತಿ ಕೋರಿ ಮೌನಾಚರಣೆ ಮಾಡಲಾಯಿತು.

ಡಾ. ಯಂಕನಗೌಡ ಪಾಟೀಲ್ ಕಾರ್ಯಕ್ರಮ ನಡೆಸಿಕೊಟ್ಟರು, ಲೇಖಕ ಇಲಿಯಾಸ್ ಪಟೇಲ್ ಸ್ವಾಗತಿಸಿದರು.

# ಸಂಚಲನ ಮೂಡಿಸಿದ್ದ ಕೆಂಭಾವಿ ಪುರಸಭೆ ಹೈಡ್ರಾಮಾ ಅಂತ್ಯ

## ಪುರಸಭೆ ಅಧ್ಯಕ್ಷೆ ಪ್ರಿಯಾ ರಾಮನಗೌಡ ಪೊ. ಪಾಟೀಲ್ ವಿರುದ್ಧ ಅವಿಶ್ವಾಸ ನಿರ್ಣಯ ಯಶಸ್ವಿ

■ ಉದಯರಶ್ಮಿ ದಿನಪತ್ರಿಕೆ



**"ಪುರಸಭೆ ಕಾಯ್ದೆ 1964ರ ಕಲಂ 42(9) ಅನುಸಾರವಾಗಿ ನಡೆದ ಈ ವಿಶೇಷ ಸಭೆಯಲ್ಲಿ ಪುರಸಭೆಯ 23 ಸದಸ್ಯರ ಪೈಕಿ 20 ಜನ ಸದಸ್ಯರು ಹಾಜರಾಗಿದ್ದರು. ಒಬ್ಬ ಸದಸ್ಯರು ಮಾತ್ರ ಅಧ್ಯಕ್ಷರ ಪರವಾಗಿ ಮತ ಹಾಕಿದರೆ, ಅವಿಶ್ವಾಸ ಮಂಡನೆಗೆ ಅವಶ್ಯವಿದ್ದ 16 ಮತಗಳ ಪೈಕಿ 18 ಸದಸ್ಯರು ಅವಿಶ್ವಾಸದ ಪರ ಕೈ ಎತ್ತಿದ್ದಾರೆ. ಒಬ್ಬರು ತಟಸ್ಥರಾಗಿದ್ದರು. ಸಭೆಯಲ್ಲಿ ಮೂರನೇ ಎರಡು ಭಾಗದಷ್ಟು ಬಹುಮತದೊಂದಿಗೆ ಅವಿಶ್ವಾಸ ನಿರ್ಣಯ ಅಂಗೀಕಾರವಾಗಿರುವುದರಿಂದ ಈ ಕ್ಷಣದಿಂದಲೇ ಪುರಸಭೆ ಅಧ್ಯಕ್ಷರ ಅಧಿಕಾರ ಮುಕ್ತಾಯವಾಗುತ್ತದೆ."**

**■ ಶ್ರೀಧರ್ ಗೋಟೂರ್**
**ಪುರಸಭೆ ಆಡಳಿತಾಧಿಕಾರಿ ಹಾಗೂ ಸಹಾಯಕ ಆಯುಕ್ತರು, ಯಾದಗಿರಿ ಜಿಲ್ಲೆ.**

ಕೆಂಭಾವಿ: ಕಳೆದ ಹದಿನೈದು ದಿನಗಳಿಂದ ಜಿಲ್ಲೆಯಾದ್ಯಂತ ತೀವ್ರ ರಾಜಕೀಯ ಸಂಚಲನ ಮೂಡಿಸಿದ್ದ ಕೆಂಭಾವಿ ಪಟ್ಟಣ ಪುರಸಭೆಯ ಅಧ್ಯಕ್ಷರ ವಿರುದ್ಧದ ಅವಿಶ್ವಾಸ ನಿರ್ಣಯ ಪ್ರಕ್ರಿಯೆ ಅಧಿಕೃತವಾಗಿ ಮುಕ್ತಾಯಗೊಂಡಿದೆ.

ಆಡಳಿತಾರೂಢ ಕಾಂಗ್ರೆಸ್‌ನ ಬಂಡಾಯದ ಅಲೆಯಲ್ಲಿ ಅಧ್ಯಕ್ಷೆ ಪ್ರಿಯಾ ರಾಮನಗೌಡ ಪೊಲೀಸ್ ಪಾಟೀಲ್ ತಮ್ಮ ಸ್ಥಾನ ಕಳೆದುಕೊಂಡಿದ್ದಾರೆ. ಯಾದಗಿರಿ ಉಪ ವಿಭಾಗಾಧಿಕಾರಿ ಶ್ರೀಧರ ಗೋಟೂರ್ ರವರ ನೇತೃತ್ವದಲ್ಲಿ ಪುರಸಭೆ ಸಭಾಂಗಣದಲ್ಲಿ ಸೋಮವಾರ ನಡೆದ ವಿಶೇಷ ಸಭೆಯಲ್ಲಿ ಅಧ್ಯಕ್ಷರ ವಿರುದ್ಧ ಮಂಡಿಸಲಾಗಿದ್ದ ಅವಿಶ್ವಾಸ ನಿರ್ಣಯವು ಭಾರಿ ಬಹುಮತದೊಂದಿಗೆ ಅಂಗೀಕಾರಗೊಂಡಿತು.

ಸಭೆಗೆ ಬಿಜೆಪಿ ಬೆಂಬಲಿತ ಇಬ್ಬರು ಸದಸ್ಯರನ್ನೊಳಗೊಂಡಂತೆ ಒಟ್ಟು 20 ಸದಸ್ಯರು ಹಾಜ–ರಿದ್ದರು. ಅವಿಶ್ವಾಸ ಗೊತ್ತುವಳಿ ಸೂಚನೆಯಂತೆ 18 ಮತಗಳು ಹಾಲಿ ಅಧ್ಯಕ್ಷರ ವಿರುದ್ಧ ಬಿದ್ದರೆ, ಒಂದು ತಟಸ್ಥ ಮತ್ತು ಒಂದು ಮತ ಅಧ್ಯಕ್ಷರ ಪರವಾಗಿ ಚಲಾವಣೆಯಾಯಿತು. ಪುರಸಭೆ ಕಾಯ್ದೆ 1964, ಕಲಂ 42(9) ರಂತೆ ಮೂರನೇ ಎರಡು ಭಾಗದಷ್ಟು ಬಹುಮತದೊಂದಿಗೆ ಅವಿಶ್ವಾಸ ಗೊತ್ತುವಳಿ ಅಂಗೀಕಾರವಾದ ಹಿನ್ನೆಲೆಯಲ್ಲಿ ಹಾಲಿ ಅಧ್ಯಕ್ಷೆ ಪ್ರಿಯಾ ರಾಮನಗೌಡ ಪೊ.ಪಾಟೀಲ್ ತಮ್ಮ ಸ್ಥಾನವನ್ನು ಕಳೆದುಕೊಂಡರು. ಈ ಸಂದರ್ಭದಲ್ಲಿ ಸುರಪುರ ತಹಸೀಲ್ದಾರ್ ಎ ಎಸ್ ಸರ್ಕಾವಸ್, ಪುರಸಭೆ ಮುಖ್ಯ ಅಧಿಕಾರಿ ಪ್ರಕಾಶ್ ಬಾಗ್ಲಿ, ಪುರಸಭೆ ಸದಸ್ಯರು, ಕಂದಾಯ ಹಾಗೂ ಪುರಸಭೆ ಸಿಬ್ಬಂದಿ ಹಾಜರಿದ್ದರು. ಪೊಲೀಸರು ಬಿಗಿ ಬಂದೋಬಸ್ತ ಕಲ್ಪಿಸಿದ್ದರು.

ಇದರೊಂದಿಗೆ ಕೆಂಭಾವಿ ಪುರಸಭೆಯ ಹೈಡ್ರಾಮಾಗೆ ಸದ್ಯಕ್ಕೆ ತೆರೆ ಬಿದ್ದಂತಾಗಿದ್ದು, ಮುಂದಿನ ಅವಧಿಗೆ ಅಧ್ಯಕ್ಷ ಗಾದಿ ಹಿಡಿಯಲು ಕಾಂಗ್ರೆಸ್ ಪಾಳೆಯದಲ್ಲಿ ವ–ರಿಷ್ಠರ ಸೂಚನೆ ಪಾಲನೆಯಾಗಲಿದೆಯೇ ಅಥವಾ ಹೊಸ ಪೈಪೋಟಿ ಶುರುವಾಗಲಿದೆಯೇ ಎಂದು ಕಾದು ನೋಡಬೇಕಿದೆ.

### ತಮ್ಮದೇ ಪಕ್ಷದ ಅಧ್ಯಕ್ಷರ ವಿರುದ್ಧ ಮತ

**ಅಧಿಕಾರ ಹಂಚಿಕೆಯ ಒಳ ಒಪ್ಪಂದದಂತೆ ನೀಡಿದ್ದ ರಾಜೀನಾಮೆಯನ್ನು ವರಿಷ್ಠರ ಗಮನಕ್ಕೆ ತರದೆ ದಿಢೀರನೆ ವಾಪಸ್ ಪಡೆದಿದ್ದ ಪ್ರಿಯಾ ಪೊ. ಪಾಟೀಲ್ ನಡೆ ಕಾಂಗ್ರೆಸ್ ವಲಯದಲ್ಲಿ ತೀವ್ರ ಅಸಮಾಧಾನ ಮೂಡಿಸಿತ್ತು. ಸೋಮವಾರ ನಡೆದ ಮತ ಚಲಾವಣೆಯಲ್ಲಿ ಕಾಂಗ್ರೆಸ್‌ನ ಬಹುತೇಕ ಸದಸ್ಯರು ಒಗ್ಗಟ್ಟಾಗಿ ತಮ್ಮದೇ ಪಕ್ಷದ ಅಧ್ಯಕ್ಷರ ವಿರುದ್ಧ ಮತ ಚಲಾಯಿಸುವ ಮೂಲಕ ವರಿಷ್ಠರ ನಿರ್ಧಾರಕ್ಕೆ ಜೈ ಎಂದಿದ್ದಾರೆ.**

# ಅನ್ನಭಾಗ್ಯ ಯೋಜನೆಯಡಿ ಜುಲೈ ತಿಂಗಳ ಪಡಿತರ ಹಂಚಿಕೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ ಹಾಗೂ ಅನ್ನಭಾಗ್ಯ ಯೋಜನೆಯಡಿ ಜುಲೈ 2026 ನೇ ತಿಂಗಳಿಗೆ ಆಹಾರ ಧಾನ್ಯಗಳನ್ನು ಹಂಚಿಕೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ತಿಳಿಸಿದ್ದಾರೆ. 1 ರಿಂದ 3 ಸದಸ್ಯರಿರುವ ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಗೆ 35 ಕೆಜಿ. ಇದರಲ್ಲಿ 21 ಕೆಜಿ ಜೋಳ ಹಾಗೂ ಇನ್ನುಳಿದಂತೆ 14 ಕೆಜಿ ಅಕ್ಕಿ, ಅದರಂತೆ 4 ಹಾಗೂ ಅದಕ್ಕಿಂತ ಹೆಚ್ಚಿನ ಸದಸ್ಯರಿರುವ ಅಂತ್ಯೋದಯ ಅನ್ನ ಪಡಿತರ ಚೀಟಿಗೆ ಪ್ರತಿ ಸದಸ್ಯರಿಗೆ 10 ಕೆಜಿಯಂತೆ ಲೆಕ್ಕಾಚಾರದಡಿ 21 ಕೆಜಿ ಜೋಳ ಮತ್ತು ಇನ್ನುಳಿದಂತೆ ಅಕ್ಕಿಯನ್ನು ಹಂಚಿಕೆ ನೀಡಲಾಗಿದೆ ಎಂದವರು ತಿಳಿಸಿದ್ದಾರೆ. ಬಿಪಿಎಲ್ ಪಡಿತರ ಚೀಟಿಯ ಪ್ರತಿ ಸದಸ್ಯರಿಗೂ 3 ಕೆಜಿ ಜೋಳ ಹಾಗೂ 7 ಕೆಜಿ ಅಕ್ಕಿಯಂತೆ ಹಂಚಿಕೆ ನೀಡಲಾಗಿರುತ್ತದೆ. ಪಡಿತರ ಚೀಟಿದಾರರು ಆಯಾ ನ್ಯಾಯ ಬೆಲೆ ಅಂಗಡಿಯಲ್ಲಿ ಬಯೋಮೆಟ್ರಿಕ್ ನೀಡಿ ಪಡಿತರ ವಸ್ತುಗಳನ್ನು ಪಡೆಯಬಹುದಾಗಿದೆ.

ಸಾರ್ವಜನಿಕ ವಿತರಣಾ ಪದ್ಧತಿಯಡಿ ಹಂಚಿಕೆ ಮಾಡಲಾಗಿರುವ ಆಹಾರ ಧಾನ್ಯಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡದೇ ಸದುದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳಲು ಈ ಮೂಲಕ ಸೂಚಿಸಲಾಗಿದೆ. ಒಂದು ವೇಳೆ ಮಾರಾಟ ಮಾಡುವುದು ಕಂಡು ಬಂದಲ್ಲಿ ಅಂತಹ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗುವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ಎಚ್ಚರಿಕೆ ನೀಡಿದ್ದಾರೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR